# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 161 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–01–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 161 | Title- Code: KARKAN 28269 | Chitradurga | Date: 09-01-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಕಾಲೇಜಿನ ಫಲಿತಾಂಶ ಉತ್ತಮಪಡಿಸುವತ್ತ ಗಮನನೀಡಿ: ಶಾಸಕ ರಘುಮೂರ್ತಿ 2
ಅಮೃತ್ ಯೋಜನೆಯಡಿ ರೈಲ್ವೇ ನಿಲ್ದಾಣಗಳು ಮೇಲ್ದರ್ಜೆಗೆ: ಎ.ನಾರಾಯಣ ಸ್ವಾಮಿ 3
ಭದ್ರಾ ಮೇಲ್ದಂಡೆಗೆ 5300 ಕೋಟಿ ರೂ ಬಿಡುಗಡೆಗೊಳಿಸುವಂತೆ ಸಚಿವರಿಗೆ ಮನವಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

### ದಿಶಾ ಸಮಿತಿ ಸಭೆಯಲ್ಲಿ ಕೇಂದ್ರ ಸಚಿವ ಎ. ನಾರಾಯಣಸ್ವಾಮಿ ಸೂಚನೆ

# ಪಿ.ಎಂ. ವಿಶ್ವಕರ್ಮ ಯೋಜನೆಯ ಸೌಲಭ್ಯ ಪಡೆಯಲು ಕೂಡಲೆ ತರಬೇತಿ ಪ್ರಾರಂಭಿಸಿ

» ಚಿತ್ರದುರ್ಗ

ವಿವಿಧ ವೃತ್ತಿ ಆಧಾರಿತ ಕುಶಲಕರ್ಮಿಗಳಿಗೆ ಆರ್ಥಿಕ ನೆರವು ನೀಡಲು ಜಾರಿಗೊಂಡಿರುವ ಪಿ.ಎಂ. ವಿಶ್ವಕರ್ಮ ಯೋಜನೆಯಡಿ ಜಿಲ್ಲೆಯಲ್ಲಿ ಸುಮಾರು 98 ಸಾವಿರ ಜನ ನೊಂದಣಿ ಮಾಡಿಕೊಂಡಿದ್ದು, ಇದರಲ್ಲಿ ಅನುಮೋದನೆಗೊಂಡ ಅರ್ಹರಿಗೆ ಕೂಡಲೆ ತರಬೇತಿ ನೀಡುವ ಕಾರ್ಯ ಪ್ರಾರಂಭವಾಗಬೇಕು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದ ಎ. ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಾನಾ ವೃತ್ತಿಗಳಲ್ಲಿ ತೊಡಗಿರುವ ಶ್ರಮಿಕ ವರ್ಗದವರು, ಬಡಗಿ, ದೋಣಿ ತಯಾರಿಕೆ, ಶಸ್ತ್ರ ತಯಾರಿಕೆ, ಕಮ್ಮಾರಿಕೆ, ಕಲ್ಲುಕುಟಿಗ, ಬಟ್ಟೆ, ಚಾಪೆ–ಕಸಪರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಿಕೆ, ಕ್ಷೌರಿಕ ವೃತ್ತಿ, ಸುತ್ತಿಗೆ ಮತ್ತು ಉಪಕರಣಗಳ ತಯಾರಿಕೆ, ಹೂಮಾಲೆ ತಯಾರಿಕೆ, ಅಗಸರು (ದೋಬಿ) ಆಭರಣ ತಯಾರಿಕೆ, ಟೈಲರಿಂಗ್, ಕುಂಬಾರಿಕೆ, ಮೀನು ಬಲೆ ಹೆಣೆಯುವವರು, ಮೂರ್ತಿ ಮತ್ತು ಕಲ್ಲಿನ ಕೆತ್ತನೆ ಮಾಡುವ ಶಿಲ್ಪಿಗಳು, ಚಮ್ಮಾರರು, ಪಾದರಕ್ಷೆ ತಯಾರಕರು, ಬೀಗ ತಯಾರಿಕೆ ಸೇರಿದಂತೆ ವಿವಿಧ ಬಗೆಯ ವೃತ್ತಿ ಮಾಡುವವರು, ತಮ್ಮ ವೃತ್ತಿ ಸುಧಾರಣೆಗೆ ಅಗತ್ಯವಿರುವ ಉಪಕರಣಗಳನ್ನು ಖರೀದಿಸಲು ಆರ್ಥಿಕ ಸಹಾಯ ನೀಡುವ ಸಲುವಾಗಿ ಸರ್ಕಾರ ವಿಶ್ವಕರ್ಮ ಯೋಜನೆ ಜಾರಿಗೊಳಿಸಿದೆ ಎಂದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಪ್ರತಿಕ್ರಿಯಿಸಿ ಜಿಲ್ಲೆಯಲ್ಲಿ ಸುಮಾರು 93 ಸಾವಿರ ಜನರು ಯೋಜನೆಯಡಿ ನೊಂದಣಿ ಮಾಡಿಕೊಂಡಿದ್ದಾರೆ. ಈ ಪೈಕಿ ಟೈಲರಿಂಗ್ ವೃತ್ತಿಗೆ ಸಂಬಂಧಿಸಿದಂತೆಯೇ ಹೆಚ್ಚಿನವರು ನೊಂದಣಿ ಮಾಡಿಕೊಂಡಿದ್ದಾರೆ. ನೊಂದಣಿ ಮಾಡಿಕೊಂಡವರ ಪೈಕಿ 03 ಹಂತಗಳಲ್ಲಿ ಈಗಾಗಲೆ ಸುಮಾರು 16 ಸಾವಿರ ಫಲಾನುಭವಿಗಳಿಗೆ ಅನುಮೋದನೆ ನೀಡಿದ್ದು, ತರಬೇತಿಗಾಗಿಯೇ 19 ಏಜೆನ್ಸಿಗಳನ್ನು ಗುರುತಿಸಲಾಗಿದೆ. ಒಂದು ಕೇಂದ್ರದಲ್ಲಿ ತರಬೇತಿಯನ್ನು ಕೂಡ ಪ್ರಾರಂಭಿಸಲಾಗಿದೆ. ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯಲ್ಲಿ 50 ತರಬೇತಿ ಕೇಂದ್ರಗಳನ್ನು ಗುರುತಿಸಿ ವರದಿ ಸಲ್ಲಿಸುವಂತೆ ಸೂಚನೆ ಬಂದಿದ್ದು, ಗುರುತಿಸುವ ಕಾರ್ಯ ನಡೆದಿದೆ ಎಂದರು. ಅರ್ಹ ಫಲಾನುಭವಿಗಳಿಗೆ ತಿಂಗಳ ಒಳಗೆ ತರಬೇತಿ ಪ್ರಾರಂಭಿಸಬೇಕು ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ರಾಷ್ಟ್ರೀಯ ಹೆದ್ದಾರಿಯಲ್ಲಿ ಮೊಳಕಾಲ್ಮೂರು ತಾಲ್ಲೂಕು ಬಿ.ಜೆ. ಕರೆ ಹಾಗೂ ತಳಕು ಹೋಬಳಿಯ ಗಿರಿಯಮ್ಮನಹಳ್ಳಿ, ಚಳ್ಳಕೆರೆ ತಾಲ್ಲೂಕಿನ ಹೊಟ್ಟೆಪ್ಪನಹಳ್ಳಿ ಬಳಿ ಸ್ಥಳೀಯರು ರಸ್ತೆ ದಾಟಲು ಸೂಕ್ತ ಕೆಳಸೇತುವೆ ಇಲ್ಲದೇ ಸಂಕಷ್ಟ ಅನುಭಿಸುತ್ತಿದ್ದಾರೆ. ಬಿ.ಜೆ.ಕೆರೆ ಬಳಿ ಕಳೆದ ಒಂದು ವರ್ಷದಲ್ಲಿ ಅಪಘಾತದಿಂದ 6 ಜನರು ಮೃತಪಟ್ಟಿದ್ದಾರೆ. ಅಪಘಾತವಾದಾಗ ಸಾರ್ವಜನಿಕರು ಹೆದ್ದಾರಿ ತಡೆದು ಪ್ರತಿಭಟಿಸುವುದರಿಂದ, ಕಾನೂನು ಸುವ್ಯವಸ್ಥೆಗೆ ಅಡ್ಡಿ ಉಂಟಾಗುತ್ತಿದೆ. 3 ಅಪಘಾತ ವಲಯಗಳಲ್ಲಿ ಸ್ಥಳೀಯರು ಹೆಚ್ಚು ಸಾವನ್ನಪ್ಪುತ್ತಿದ್ದಾರೆ. ಹೀಗಾಗಿ ಹೆದ್ದಾರಿ ಪ್ರಾಧಿಕಾರದಿಂದ ಸಮಸ್ಯೆ ಪರಿಹಾರಕ್ಕೆ ಹಾಗೂ ಅಪಘಾತ ತಡೆಗಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಸಭೆಯಲ್ಲಿ ತಿಳಿಸಿದರು. ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಗೌರವ್ ಮಾತನಾಡಿ, ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಈಗಾಗಲೆ ಅಪಘಾತ ವಲಯಗಳನ್ನು ಗುರುತಿಸಲಾಗಿದೆ. ಬಿ.ಜಿ.ಕೆರೆ ಬಳಿ ದ್ವಿ ಚಕ್ರ ವಾಹನ ಹಾಗೂ ಪಾದಚಾರಿಗಳು ರಸ್ತೆ ದಾಟಲು ಅನುಕೂಲವಾಗುವಂತೆ ಸ್ಕೈವಾಕ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲು 2 ತಿಂಗಳ ಕಾಲವಕಾಶ ಬೇಕಾಗಿದೆ. ನಂತರ 4 ತಿಂಗಳ ಅವಧಿಯಲ್ಲಿ ಸೇತುವೆಯನ್ನು ಅಳವಡಿಸಲಾಗುವುದು ಎಂದರು. ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ ಸಾರ್ವಜನಿಕರಿಂದ ಹೆಚ್ಚಿನ ಅವಹಾಲುಗಳು ಪ್ರತಿನಿತ್ಯ ಜಿಲ್ಲಾಧಿಕಾರಿಗಳ ಕಚೇರಿಗೆ ಬರುತ್ತಿವೆ. ಅಲ್ಪಾವಧಿ ಟೆಂಡರ್ ಕರೆದು ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೆದ್ದಾರಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಹೊಸದುರ್ಗ–ಹೊಳಲ್ಕೆರೆ ಹಾಗೂ ಹಿರಿಯೂರು–ಹುಳಿಯಾರು ರಾಷ್ಟ್ರೀಯ ಹೆದ್ದಾರಿ ಮಾರ್ಗಗಳ ಕಾಮಗಾರಿಗಳನ್ನು ಪೂರ್ಣಗೊಳಿಸಲು ಈಗಾಗಲೆ ನಿಗದಿತ ಕಾಲಾವಧಿ ಮುಗಿದಿದೆ. ಆದರೆ ಕಾಮಗಾರಿ ಪೂರ್ಣಗೊಂಡಿಲ್ಲ ಎಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿ, ಕೂಡಲೆ ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು.

**ಭವನಗಳನ್ನು ಸ್ತ್ರೀಶಕ್ತಿ ಸಂಘ ಅಥವಾ ಗ್ರಂಥಾಲಯಗಳಿಗೆ ನೀಡಿ :** ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಸರ್ಕಾರದ ಅನುದಾನದಡಿ ನಿರ್ಮಿಸಲಾಗಿರುವ ವಿವಿಧ ಭವನಗಳು ಬಳಕೆಯಾಗದೆ ಹಾಳಾಗುತ್ತಿವೆ. ಇಂತಹ ಭವನಗಳನ್ನು ಸ್ತ್ರೀಶಕ್ತಿ ಸಂಘಗಳಿಗೆ ಅಥವಾ ಗ್ರಂಥಾಲಯಗಳಿಗೆ ಬಳಕೆ ಮಾಡಿಕೊಳ್ಳಲು ನೀಡುವಂತೆ ಈ ಹಿಂದೆ ನಡೆದ ಸಭೆಯಲ್ಲಿ ಸೂಚನೆ ನೀಡಲಾಗಿತ್ತು, ಆದರೆ ಇದುವರೆಗೂ ಇದು ಜಾರಿಗೊಂಡಿಲ್ಲ ಎಂದ ಸಚಿವರು, ಈ ಬಗ್ಗೆ ಕೂಡಲೆ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಸೂಚನೆ ನೀಡಿದರು.

**ಆದರ್ಶ ಗ್ರಾಮಗಳಲ್ಲಿ ನರೇಗಾ ಕನ್ವರ್ಜೆನಸ್ ಮಾಡಿ ಕಾಮಗಾರಿ ಕೈಗೊಳ್ಳಿ :** ಜಿಲ್ಲೆಯಲ್ಲಿ ಆಯ್ಕೆಯಾಗಿರುವ ಆದರ್ಶ ಗ್ರಾಮಗಳಿಗೆ ನರೇಗಾ ಯೋಜನೆಯಡಿ ಕನ್ವರ್ಜೆನ್ಸ್ ಮಾಡಿಕೊಂಡು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು, ಈ ಮೂಲಕ ಉದ್ಯೋಗಖಾತ್ರಿ ಯಡಿ ಹೆಚ್ಚಿನ ಉದ್ಯೋಗ ಸೃಷ್ಠಿಯಾಗಲಿದ್ದು, ಮಾನವ ದಿನಗಳನ್ನು ಕೂಡ ಸೃಜಿಸಲು ಅವಕಾಶ ಕಲ್ಪಿಸಲಾಗಿದೆ. ಆದರೆ ಜಿಲ್ಲೆಯಲ್ಲಿ ಈ ಕಾರ್ಯ ಆಗಿಲ್ಲ ಎಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿದರು. ಪರಿಶಿಷ್ಟ ಯೋಜನೆಯಡಿ 97 ಆದರ್ಶ ಗ್ರಾಮಗಳು ಆಯ್ಕೆಗೊಂಡಿದ್ದು, 710 ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಪರಿಶಿಷ್ಟ ಪಂಗಡ ಯೋಜನೆಯಡಿ 34 ಗ್ರಾಮಗಳು ಆದರ್ಶ ಗ್ರಾಮ ಯೋಜನೆಗೆ ಆಯ್ಕೆಯಾಗಿದು, ಇಲ್ಲಿ ಒಟ್ಟು 206 ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಕಾಮಗಾರಿಗಳನ್ನು ಕೈಗೊಳ್ಳುತ್ತಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

**3 ಲಕ್ಷ ಎಬಿಎಆರ್‌ಕೆ ಕಾರ್ಡ್ ವಿತರಣೆಗೆ ಗುರಿ:** ರಾಜ್ಯ ಸರ್ಕಾರ 3 ತಿಂಗಳಲ್ಲಿ ಜಿಲ್ಲೆಯಲ್ಲಿ 1.5 ಲಕ್ಷ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಕಾರ್ಡ್ ವಿತರಣೆಗೆ ಗುರಿ ನೀಡಿದೆ.


ಪುಟ 2





## ತುಮಕೂರು-ಚಿತ್ರದುರ್ಗ-ದಾವಣಗೆರೆ ರೈಲ್ವೆಗೆ ಶೀಘ್ರ ಭೂಸ್ವಾಧೀನ ಪೂರ್ಣ

ತುಮಕೂರು–ಚಿತ್ರದುರ್ಗ–ದಾವಣಗೆರೆ ನೇರ ರೈಲ್ವೆ ಯೋಜನೆಗೆ ಚಿತ್ರದುರ್ಗ ಮತ್ತು ಹಿರಿಯೂರು ತಾಲ್ಲೂಕು ವ್ಯಾಪ್ತಿಯ ಒಟ್ಟು 101 ಕಿ.ಮೀ. ಮಾರ್ಗಕ್ಕಾಗಿ 1211.13 ಎಕರೆ ಭೂಮಿಗಾಗಿ ಬೇಡಿಕೆ ಸಲ್ಲಿಸಿದಂತೆ ಈಗಾಗಲೆ 639.09 ಎಕರೆ ಭೂಸ್ವಾಧೀನಕ್ಕಾಗಿ ಪರಿಹಾರ ವಿತರಿಸಲಾಗಿದೆ. ಉಳಿದಂತೆ 572.04 ಎಕರೆ ಭೂಸ್ವಾಧೀನ ವಿವಿಧ ಹಂತದಲ್ಲಿದೆ. ಭರಮಸಾಗರ–ಚೋಳಗಟ್ಟದವರೆಗೆ 36 ಕಿ.ಮೀ. ಪ್ರದೇಶದಲ್ಲಿ 281 ಎಕರೆ ಪ್ರದೇಶವನ್ನು ಈಗಾಗಲೆ ರೈಲ್ವೆ ಇಲಾಖೆಗೆ ಹಸ್ತಾಂತರಿಸಿದ್ದು, ಉಳಿದ 67.24 ಎಕರೆ ಜಮೀನು ಶೀಘ್ರ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗುವುದು ಎಂದು ವಿಶೇಷ ಭೂಸ್ವಾಧೀನ ಅಧಿಕಾರಿಗಳು ತಿಳಿಸಿದರು. ಈ ತಿಂಗಳ ಅಂತ್ಯದೊಳಗೆ ಶೇ. 90 ರಷ್ಟು ಭೂಸ್ವಾಧೀನ ಕಾರ್ಯ ಪೂರ್ಣಗೊಳಿಸಿ, ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸಚಿವರು ಸೂಚನೆ ನೀಡಿದರು.




## ಫಾಸ್ಟ್ ನ್ಯೂಸ್

### ಇ-ಸ್ವತ್ತು ಪಡೆಯಲು ಸ್ವಚ್ಛಗೊಳಿಸಿದ ನಿವೇಶನ ಛಾಯಚಿತ್ರ ಕಡ್ಡಾಯ

» ಚಿತ್ರದುರ್ಗ



ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ನಿವೇಶನಗಳ ಮಾಲೀಕರು ಇ–ಸ್ವತ್ತು ಹಾಗೂ ಮುಟೇಷನ್ (ಆಸ್ತಿ ಹಕ್ಕು ವರ್ಗಾವಣೆ) ಕೋರಿ ಅರ್ಜಿ ಸಲ್ಲಿಸುವಾಗ ಸ್ವಚ್ಛಗೊಳಿಸಿದ ನಿವೇಶನ ಛಾಯಚಿತ್ರ ಸಲ್ಲಿಸುವುದ ಕಡ್ಡಾಯವಾಗಿ ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ. ಬಹಳ ಜನರು ನಿವೇಶನ ಛಾಯಚಿತ್ರಗಳಲ್ಲಿ ಕಸದ ರಾಶಿ, ಗಿಡಗಳು ಬೆಳೆದಿರುವುದು ಕಂಡುಬರುತ್ತಿದೆ. ಇದರಿಂದಾಗಿ ಅಕ್ಕಪಕ್ಕದ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗುತ್ತಿದೆ.ನಗರಸೌಂದರ್ಯಕ್ಕೂ ಇದು ಹಾನಿ ಉಂಟುಮಾಡುತ್ತದೆ. ಖಾಲಿ ನಿವೇಶನದಲ್ಲಿ ಗಿಡಗಳು ಬೆಳೆದಿರುವುದರಿಂದ ನಿವೇಶನ ಸಂಖ್ಯೆ, ಅಳತೆ ಕಲ್ಲುಗಳು ಛಾಯಚಿತ್ರದಲ್ಲಿ ಕಾಣಿಸುವುದಿಲ್ಲ. ಈ ಕಾರಣದಿಂದಾಗಿ ಇ–ಸ್ವತ್ತು ಪಡೆಯುವ ಸಂದರ್ಭದಲ್ಲಿ ಸಲ್ಲಿಸುವ ಗಿಡ ಗಂಟೆಗಳು, ಕಸದ ರಾಶಿ ಇಲ್ಲದ ಛಾಯಚಿತ್ರಗಳನ್ನೇ ಸಲ್ಲಿಸುವಂತೆ ಸಾರ್ವಜನಿಕರಿಗೆ ಈ ಮೂಲಕ ಕೋರಲಾಗಿದೆ. ನಿವೇಶನಗಳನ್ನು ಕಾಲ ಕಾಲಕ್ಕೆ ಮಾಲಿಕರು ಸ್ವಚ್ಛಗೊಳಿಸದೇ ಇದ್ದರೇ, ನಿಯಮಾನುಸಾರ ನಗರಸಭೆಯಿಂದ ದಂಡ ವಿಧಿಸಲಾಗುವುದು ಎಂದು ಪೌರಾಯುಕ್ತೆ ಎಂ.ರೇಣುಕಾ ಎಚ್ಚರಿಸಿದ್ದಾರೆ.

### ಜನವರಿ 10 ರಂದು ಕನ್ನಡ ಗೀತೆಗಳೊಂದಿಗೆ ಯೋಗ ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ನಗರದ ಜೋಗಿಮಟ್ಟಿ ರಸ್ತೆಯಲ್ಲಿರುವ ವಿವೇಕಾನಂದನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಚಿನ್ಮಯ ಮಯೂರ ಯೋಗ ಕ್ರೀಡಾ ಸಾಂಸ್ಕೃತಿಕ ಸಂಸ್ಥೆ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಸಂಭ್ರಮ–50, ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಧ್ಯೇಯವಾಕ್ಯದೊಂದಿಗೆ ಕನ್ನಡಗೀತೆಗಳೊಂದಿಗೆಯೋಗತರಬೇತಿಕಾರ್ಯಾಗಾರ ಕಾರ್ಯಕ್ರಮವನ್ನು ಜನವರಿ ಹತ್ತರಂದು ಬೆಳಿಗ್ಗೆ 10–30 ಗಂಟೆಗೆ ಏರ್ಪಡಿಸಲಾಗಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಕಾರ್ಯಕ್ರಮ ಉದ್ಘಾಟಿಸುವರು. ಸ.ಹಿ.ಪ್ರಾ.ಶಾಲೆಯ ಮುಖ್ಯಶಿಕ್ಷಕ ಟಿ.ಷಣ್ಮುಖಪ್ಪ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ನಗರಸಭೆ ಮಾಜಿಸದಸ್ಯ ಜೆ.ಮಹೇಶ್, ಎಸ್‌ಡಿಎಂಸಿ ಅಧ್ಯಕ್ಷ ಕೆ.ಕುಮಾರ್, ಸ.ಹಿ.ಪ್ರಾ.ಶಾಲೆಯ ಸಹಶಿಕ್ಷಕರಾದ ಬಿ.ವಿಮಲಾಕ್ಷಿ, ಪಿ.ಬಿ.ಅನುಸೂಯಮ್ಮ, ಟಿ.ಎನ್.ಶೋಭ, ಬಾದರ 'ದಿನ್ನಿ ಆರ್ಟ್ಸ್ ಅಕಾಡೆಮಿಯ ಪ್ರಕಾಶ್ ಬಾದರದಿನ್ನಿ ಮುಖ್ಯಅತಿಥಿಗಳಾಗಿಉಪಸ್ಥಿತರಿರುವರು.ನೀನಾಸಂ ಪದವೀಧರ ಹಾಗೂ ಕಸಾಪ ಜಿಲ್ಲಾ ಕಾರ್ಯದರ್ಶಿ ಕೆ.ಪಿ.ಎಂ.ಗಣೇಶಯ್ಯ ಕನ್ನಡ ಗೀತಗಾಯನ ಹಾಗೂ ಯೋಗಶಿಕ್ಷಕ ಎಂ.ಬಿ.ಮುರುಳಿ ಇವರು ಯೋಗ ತರಬೇತಿಯ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು. ಸ.ಹಿ.ಪ್ರಾ.ಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಸರ್ಕಾರ ನಿಗಧಿಪಡಿಸಿದ ಹುಯಿಲುಗೋಳ ನಾರಾಯಣರಾಯರ ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು, ಕುವೆಂಪು ವಿರಚಿತ ಎಲ್ಲಾದರು ಇರು ಎಂತಾದರು ಇರು, ದ.ರಾ.ಬೇಂದ್ರೆಯವರ ಒಂದೇ ಒಂದೇ ಕರ್ನಾಟಕ ಒಂದೇ, ಸಿದ್ಧಯ್ಯ ಪುರಾಣಿಕ ಬರೆದ ಹೊತ್ತಿತೋ ಹೊತ್ತಿತೂ ಕನ್ನಡದ ದೀಪ, ಚನ್ನವೀರ ಕಣವಿಯವರ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡದ ಧ್ವನಿಮುದ್ರಿತ ಗೀತೆಗಳನ್ನು ಹಾಡುವುದರೊಂದಿಗೆ ಯೋಗ ತರಬೇತಿ ಕಾರ್ಯಾಗಾರ ಕಾರ್ಯಕ್ರಮವನ್ನು ನಡೆಸಲಾಗುವುದು

## ಪ್ರಮುಖ ಸುದ್ದಿ

### ನೀರಾವರಿ ಅನುಷ್ಠಾನ ಹೋರಾಟ ಸಮಿತಿಯಿಂದ ಸಚಿವ ಎ.ನಾರಾಯಣಸ್ವಾಮಿಗೆ ಮನವಿ

# ಭದ್ರಾ ಮೇಲ್ದಂಡೆಗೆ ಕೇಂದ್ರದ ಅನುದಾನ ಒದಗಿಲು ಆಗ್ರಹ

» ಚಿತ್ರದುರ್ಗ

ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಅನುದಾನದ ಕೊರತೆಯಿಂದಾಗಿ ಕುಂಟುತ್ತಾ ಸಾಗಿದ್ದು ಕೇಂದ್ರ ಸರ್ಕಾರ ಕೂಡಲೇ ಘೋಷಿತ 5300 ಕೋಟಿ ರುಪಾಯಿ ಅನುದಾನ ಬಿಡುಗಡೆ ಮಾಡಬೇಕೆಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಅವರನ್ನು ಆಗ್ರಹಿಸಿದೆ.

ಈ ಸಂಬಂಧ ಸೋಮವಾರ ಸಚಿವ ಎ.ನಾರಾಯಣಸ್ವಾಮಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಯೋಜನೆ ನಿಧಾನಗತಿಯಲ್ಲಿ ಸಾಗಿರುವುದು ರೈತಾಪಿ ಸಮುದಾಯದಲ್ಲಿ ಕಳವಳ ಮೂಡಿಸಿದೆ. ರಾಜ್ಯ ಸರ್ಕಾರದ ಉದಾಸೀನ ಮನೋಭಾವ, ಕೇಂದ್ರ ಸರ್ಕಾರ ಘೋಷಿತ ವಚನವ ಈಡೇರಿಸದೇ ಇರುವುದು ಪ್ರಮುಖ ಕಾರಣ.ಪ್ರಭುತ್ವದ ಇಚ್ಛಾಶಕ್ತಿ ಕೊರತೆಯಿಂದಾಗಿ ಜನತೆ ಪರಿತಪಿಸುವಂತಾಗಿದೆ ಎಂದು ದೂರಿದರು. ಭದ್ರಾ ಮೇಲ್ದಂಡೆಯ ರಾಷ್ಟೀಯ ಯೋಜನೆಯಾಗಿ ಘೋಷಿಸಿ ಕೇಂದ್ರದಿಂದ ಅನುದಾನ ಪಡೆಯುವ ಪ್ರಸ್ತಾಪಗಳು ಕಳೆದ ಹತ್ತು ವರ್ಷಗಳಿಂದಲೂ ಭಾರತ ಸರ್ಕಾರದ ಮುಂದಿದೆ. ಈ ಹಿಂದೆ ಯಡಿಯೂರಪ್ಪಅವರ ಸರ್ಕಾರ ಇದ್ದಾಗಲೇ ರಾಷ್ಟೀಯ ಯೋಜನೆ ಕಡತಗಳು ರಾಜ್ಯದಿಂದ ಕೇಂದ್ರ ಜಲಶಕ್ತಿ ಕಚೇರಿಗೆ ಮಂಡನೆಯಾಗಿದ್ದವು. ಕಳೆದ ವಿಧಾನಸಭೆ ಚುನಾವಣೆ ವೇಳೆ ಚಿತ್ರದುರ್ಗಕ್ಕೆ ಆಗಮಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರು ಭದ್ರಾ ಮೇಲ್ದಂಡೆಯ ರಾಷ್ಟೀಯ ಯೋಜನೆಯಾಗಿ ಘೋಷಿಸಿ 5300 ಕೋಟಿ ರುಪಾಯಿ ಅನುದಾನ ಒದಗಿಸುವುದಾಗಿ ಹೇಳಿದ್ದರು. ಪ್ರಧಾನಿ ನರೇಂದ್ರ ಮೋದಿಯವರು ಚಿತ್ರದುರ್ಗ ನೆಲದಲ್ಲಿ ನಿಂತು ಮಾಡಿದ ಘೋಷಣೆ ರೈತಾಪಿ ಸಮುದಾಯದಲ್ಲಿ ಸಂತಸದ ಹೊಳೆ ಹರಿಸಿತ್ತು. ಭದ್ರಾ ಯೋಜನೆ ಕಾಮಗಾರಿಗೆ ಚುರುಕಿನ ವೇಗ ಸಿಕ್ಕು ಬೇಗನೆ ಪೂರ್ಣಗೊಳ್ಳುತ್ತದೆ ಎಂದು ಎಲ್ಲರೂ ನಂಬಿದ್ದರು. ಆದರೆ ದೇಶದ ಪ್ರಭುತ್ವದ ವಾರಸುದಾರಿಕೆ ಹೊತ್ತಿರುವ ಪ್ರಧಾನಿ ಮೋದಿಯವರ ಅನುದಾನದ ಘೋಷಣೆ ಹುಸಿಯಾಗಿದ್ದು ಸಾಂವಿಧಾನಿಕ ಹುದ್ದೆಗಳ ಜವಾಬ್ದಾರಿಗಳು ನಿರ್ವಹಣೆಯಾಗುತ್ತಿರುವ ಬಗ್ಗೆ ಜನ ಅನುಮಾನ ಪಡುವಂತಾಗಿದೆ.



ಪುಟ 2

## ಫಾಸ್ಟ್ ನ್ಯೂಸ್

### ಪಿ.ಎಂ. ವಿಶ್ವಕರ್ಮ ಯೋಜನೆಯ ಸೌಲಭ್ಯ ಪಡೆಯಲು ಕೂಡಲೆ ತರಬೇತಿ ಪ್ರಾರಂಭಿಸಿ

» ಮೊದಲ ಪುಟದಿಂದ

ಆದರೆ ಜಿಲ್ಲೆಯಲ್ಲಿ ಕಾರ್ಡು ವಿತರಣೆಯನ್ನು ಅಭಿಯಾನ ಮಾದರಿಯಲ್ಲಿ ಕೈಗೊಳ್ಳಲು ನಿರ್ಧರಿಸಲಾಗಿದೆ. ಈ ಅಭಿಯಾನದಲ್ಲಿ 3 ಲಕ್ಷ ಕಾರ್ಡ್ ವಿತರಿಸಿಲು ಗುರಿ ಹಾಕಿಕೊಳ್ಳಲಾಗಿದೆ. ಜಿಲ್ಲಾ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಸೇರಿದಂತೆ ಎಲ್ಲಾ ಹಂತದ ಆಸ್ಪತ್ರೆಗಳಲ್ಲಿ ಕಾರ್ಡು ವಿತರಣೆಯ ಕಾರ್ಯ ಪ್ರಗತಿಯಲ್ಲಿದೆ. ಜಿಲ್ಲೆಯ ಎಲ್ಲಾ ಕುಟುಂಬಗಳಿಗೂ ಕಾರ್ಡು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಸಭೆಯಲ್ಲಿ ಹೇಳಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್, ಜಿ.ಪಂ. ಯೋಜನಾ ನಿರ್ದೇಶಕ ಡಾ. ರಂಗಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಭದ್ರಾ ಮೇಲ್ದಂಡೆಗೆ ಕೇಂದ್ರದ ಅನುದಾನ ಒದಗಿಲು ಆಗ್ರಹ

» ಮೊದಲ ಪುಟದಿಂದ

ನಂತರ ನಡೆದ ವಿದ್ಯಮಾನಗಳಲ್ಲಿ ಸದ್ಯದ ಪರಿಸ್ಥಿತಿಯಲ್ಲಿ ಭದ್ರಾ ಮೇಲ್ದಂಡೆಯ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಣೆ ಮಾಡಲು ಸಾಧ್ಯವಿಲ್ಲ. ಬದಲಿ ಪ್ರಸ್ತಾವನೆ ಸಲ್ಲಿಸಿದರೆ ಕೇಂದ್ರ ಸರ್ಕಾರ ಪರಿಗಣಿಸುತ್ತದೆ ಎಂಬ ಜಲಶಕ್ತಿ ಸಚಿವಾಲಯದ ನಿರ್ದೇಶನವನ್ನು ರಾಜ್ಯ ಸರ್ಕಾರ ಪಾಲಿಸಿದೆ. ಪ್ರಧಾನ ಮಂತ್ರಿ ಕೃಷಿ ಸಂಚಾಯಿನಿ ಯೋಜನೆ ಆಗ್ಗಿಲರೇಟೆಡ್ ಇರಿಗೇಷನ್ ಬೆನಿಫಿಟ್ ಪ್ರೋಗ್ರಾಮ್ (ಕಒಏಖಜ-ಂಋಃಕ) ಅಡಿ ಅನುದಾನ ಒದಗಿಸುವ ಪ್ರಸ್ತಾವನೆಯನ್ನು ಕೇಂದ್ರದ ಮುಂದೆ ಮಂಡಿಸಲಾಗಿದೆ. ಈ ಸಂಬಂಧ ತಾವುಗಳೂ 3-7-3023 ರಂದು ಕೇಂದ್ರ ಜಲಶಕ್ತಿ ಸಚಿವ ಶೆಖಾವತ್ ಅವರಿಗೆ ಪತ್ರ ಬರೆದು ಪಿಎಂಕೆಎಸ್ ವೈ-ಎಐಬಿಪಿ ಯೋಜನೆಯಡಿ ಭದ್ರಾ ಮೇಲ್ದಂಡೆಗೆ ಅನುದಾನ ಒದಗಿಸುಂತೆ ಮನವಿ ಮಾಡಿಕೊಂಡಿದ್ದು ಅದೂ ಕೂಡಾ ಈಡೇರಿಲ್ಲ.ಭದ್ರಾ ಮೇಲ್ದಂಡೆ ಯೋಜನೆ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದಲ್ಲಿಇಬ್ಬರು ಸಚಿವರಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ಒತ್ತಡ ಹಾಕಿ ಮಂದಿನ ಕೇಂದ್ರ ಸಂಪುಟದಲ್ಲಿ ಒಪ್ಪಿಗೆ ಪಡೆದು ಅನುದಾನ ಬಿಡುಗಡೆ ಮಾಡಬೇಕು. ಈ ಬಗ್ಗೆ ಮಧ್ಯ ಕರ್ನಾಟಕದ ರೈತಾಪಿ ಸಮುದಾಯದ ತಾಳ್ಮೆಯನ್ನು ಪರೀಕ್ಷಿಸುವುದು ತರವಲ್ಲ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಇದೇ ಉದಾಸೀನ ಮನೋಭಾವ ತಳೆದಲ್ಲಿ ಹೋರಾಟವನ್ನು ಉಗ್ರ ರೂಪಕ್ಕೆ ಒಯ್ಯುವುದು ಅನಿವಾರ್ಯವಾಗುತ್ತದೆ ಎಂದು ಮನವಿಯಲ್ಲಿ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಎಚ್ಚರಿಸಿದೆ. ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ್, ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕೆ.ಸಿ.ಹೊರಕೇರಪ್ಪ, ಜಿಲ್ಲಾ ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮಲ್ಲಾಪುರ ತಿಪ್ಪೇಸ್ವಾಮಿ, ಮುದ್ದಾಪುರ ನಾಗರಾಜ್, ಹಿರಿಯೂರು ತಾಲೂಕು ಅಧ್ಯಕ್ಷ ಶಿವಕುಮಾರ್ ಬ್ಯಾಡರಹಳ್ಳಿ, ಚಿತ್ರದುರ್ಗ ತಾಲೂಕು ಅಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಸಮಿತಿ ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ ಈ ವೇಳೆ ಉಪಸ್ಥಿತರಿದ್ದರು.

### ತಾಲ್ಲೂಕಿನ ಇರ್ವರು ಗ್ರಾಮೀಣ ಪ್ರತಿಭೆಗಳಿಗೆ ಪಿಎಚ್‌ಡಿ ಪದವಿ

» ಚಳ್ಳಕೆರೆ

ತಾಲ್ಲೂಕಿನ ನನ್ನಿವಾಳ ಗ್ರಾಮದ ಡಿ.ಪಿ.ಮಹೇಶ್ ಹಂಪಿಕನ್ನಡ ವಿಶ್ವವಿ ದ್ಯಾಲಯ ಚರಿತ್ರೆ ವಿಭಾಗದ



ಪ್ರಾಧ್ಯಾಪಕರಾದ ಡಾ.ವಿರೂಪಾಕ್ಷಿ ಪೂಜಾರಹಳ್ಳಿ ಮಾರ್ಗದರ್ಶನದಲ್ಲಿ ಪೆರಿಯಾರ್ ರಾಮಸ್ವಾಮಿ ನಾಯ್ಕರ್ ಚಿಂತನೆ ಹಾಗೂ ದ್ರಾವಿಡ ಚಳವಳಿಗಳ ಚಾರಿತ್ರಿಕ ವಿಶ್ಲೇಷಣೆ ಮಹಾಪ್ರಬಂಧಕ್ಕೆ ಪಿಎಚ್‌ಡಿ ಲಭಿಸಿದೆ. ಮಹೇಶ್ ಪ್ರಸ್ತುತ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

**ಕೆ.ಓ.ಕೆಂಗಯ್ಯ:** ತಾಲ್ಲೂಕಿನ ಮಲ್ಲೂರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುತ್ತೇನಹಳ್ಳಿಯ



ಕೆ.ಓ.ಕೆಂಗಯ್ಯರವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಪಿಎಚ್‌ಡಿಗೆ ಭಾಜನರಾಗಿದ್ದಾರೆ. ಡಾ. ಪೂರ್ಣಿಮಾರವರ ಮಾರ್ಗದರ್ಶನದಲ್ಲಿ ಗಿರೀಶ್ ಕಾರ್ನಾಡ್ ಮತ್ತು ಚಂದ್ರಶೇಖರ ಕಂಬಾರರ ನಾಟಕಗಳಲ್ಲಿ ಜಾನಪದೀಯ ನೆಲೆಗಳು ಎಂಬ ಪ್ರಬಂಧಕ್ಕೆ ಡಾಕ್ಟರೇಟ್ ಲಭಿಸಿದೆ.

## ಸರ್ಕಾರಿ ಪದವಿಪೂರ್ವ ಕಾಲೇಜಿನ ವಿವಿಧ ಘಟಕಗಳ ಸಮಾರೋಪ ಸಮಾರಂಭ

# ಕಾಲೇಜಿನ ಫಲಿತಾಂಶ ಉತ್ತಮಪಡಿಸಿ: ಶಾಸಕ

» ಚಳ್ಳಕೆರೆ

ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಹೆಚ್ಚಿನ ಸಂಖ್ಯೆಯಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜು ರಾಷ್ಟ್ರೀಯ ಸೇವಾ ಯೋಜನಾ, ಕ್ರೀಡೆ ಮತ್ತು ಸಾಂಸ್ಕೃತಿಕ, ರೋವರ್ಸ್ ಅಂಡ್ ರೇಂಜರ್ಸ್ ಘಟಕಗಳ ಕಾರ್ಯನಿರ್ವಹಣೆಯಲ್ಲಿ ಮೇಲುಗೈ ಸಾಧಿಸಿದೆ. ವಿಶೇಷವಾಗಿ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ರಾಜ್ಯಮಟ್ಟದ ಪ್ರಶಸ್ತಿ ಗಳಿಸಿದೆ. ಶೈಕ್ಷಣಿಕ ದೃಷ್ಠಿಯಿಂದ ಇನ್ನೂ ಹೆಚ್ಚಿನ ಬದಲಾವಣೆಯನ್ನು ನಿರೀಕ್ಷೆ ಮಾಡಲಾಗುತ್ತಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.





ಅವರು, ಸೋಮವಾರ ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ, ಕ್ರೀಡೆ ಮತ್ತು ಸಾಂಸ್ಕೃತಿಕ, ರೋವರ್ಸ್ ಅಂಡ್ ರೇಂಜರ್ಸ್ ಘಟಕಗಳ ಸಮಾರೋಪ ಸಮಾರಂಭವನ್ನು ದೀಪಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಕಾಲೇಜಿನ ಎಲ್ಲಾ ವಿಭಾಗಗಳಲ್ಲೂ ಸಾಕಷ್ಟು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗಿದ್ದಾರೆ. ಶೈಕ್ಷಣಿಕ ಪ್ರಗತಿಯನ್ನು ಹೊಂದುವ ಅಭಿಲಾಷೆ ಎಲ್ಲಾ ವಿದ್ಯಾರ್ಥಿಗಳದ್ದು, ಕಾಲೇಜಿನ ಬೋಧಕ ವರ್ಗ ಹಾಗೂ ಪ್ರಾಚಾರ್ಯರು ಇತರೆ ಚಟುವಟಿಕೆಗಳಿಗೆ ಹೆಚ್ಚು ಮುತುವರ್ಜಿ ವಹಿಸುವಂತೆ ಫಲಿತಾಂಶವನ್ನು ಹೆಚ್ಚಿಸುವಲ್ಲಿ ಗಮನ ನೀಡಬೇಕು ಎಂದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದ ಹಿರಿಯ ರಂಗಕರ್ಮಿ ಪಿ.ತಿಪ್ಪೇಸ್ವಾಮಿ, ಎನ್‌ಎಸ್‌ಎಸ್ ಯೋಜನೆ ಅನುಷ್ಠಾನದಲ್ಲಿ ರಾಜ್ಯಪ್ರಶಸ್ತಿ ಪಡೆದ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ಹಾಗೂ ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತಾಲ್ಲೂಕು, ಜಿಲ್ಲಾ, ರಾಜ್ಯ ಮಟ್ಟದಲ್ಲಿ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಅಭಿನಂದಿಸಿದರು.

ಜಗಲೂರಿನ ನಿವೃತ್ತ ಉಪನ್ಯಾಸಕ ಡಿ.ಸಿ.ಮಲ್ಲಿಕಾರ್ಜುನ ಕಾರ್ಯಕ್ರಮದ ಸಮಾರೋಪ ಭಾಷಣ ಮಾಡಿ, ಇಲ್ಲಿನ ಸರ್ಕಾರಿ ಪದವಿಪೂರ್ವ ಕಾಲೇಜು ವಿಶ್ವವಿದ್ಯಾಲಯ ಮಟ್ಟದಲ್ಲಿ ಬೆಳವಣಿಗೆಯಾಗಬೇಕು ಎಂಬ ಹಂಬಲ ಎಲ್ಲರದ್ದು, ಹಲವಾರು ಕಾರ್ಯಚಟುವಟಿಕೆಗಳಲ್ಲಿ ಮೈಲಿಗಲ್ಲು ಸಾಧಿಸಿದರೂ ಶೈಕ್ಷಣಿಕವಾಗಿಯೂ ಕಾಲೇಜು ಇನ್ನೂ ಹೆಚ್ಚಿನ ಫಲಿತಾಂಶ ದಾಖಲಿಸಬೇಕಿದೆ. ವಿದ್ಯಾರ್ಥಿಗಳು ಉಪನ್ಯಾಸಕರು, ಪ್ರಾಧ್ಯಾಪಕರು, ನೀಡುವ ಶಿಕ್ಷಣವನ್ನು ಸರಿಯಾದ ರೀತಿಯಲ್ಲಿ ಅರ್ಥೈಸಿಕೊಳ್ಳಬೇಕು. ನಿರ್ಲಕ್ಷ್ಯ ವಹಿಸಿದರೆ ಅದು ವಿದ್ಯಾರ್ಥಿಗಳ ಬದುಕಿಗೆ ಮಾರಕವಾಗುವ ಸಂಭವವಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಬದುಕನ್ನು ಕಟ್ಟಿಕೊಳ್ಳಬೇಕಾದರೆ ತಾವು ಪಡೆಯುತ್ತಿರುವ ಶಿಕ್ಷಣದ ಬಗ್ಗೆ ಹೆಚ್ಚು ಪರಿಶ್ರಮವನ್ನು ಹೊಂದಬೇಕಾಗುತ್ತದೆ. ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ ಪ್ರಗತಿಯತ್ತ ಹೆಜ್ಜೆ ಇಡಲು ಎಲ್ಲಾ ವಿದ್ಯಾರ್ಥಿಗಳು ಸಂಕಲ್ಪ ಮಾಡಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಎಂ.ರವೀಶ್ ಮಾತನಾಡಿ, ಕಾಲೇಜಿನ ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಶಾಸಕರಾದ ಟಿ.ರಘುಮೂರ್ತಿಯವರ ಮಾರ್ಗದರ್ಶನದಲ್ಲಿ ಕಾಲೇಜಿನ ಸರ್ವತೋಮುಖ ಬೆಳವಣಿಗೆಗೆ ಎಲ್ಲರ ಸಹಕಾರ ಪಡೆದು ಉತ್ತಮ ಕೆಲಸವನ್ನು ಮಾಡಲಾಗುತ್ತಿದೆ. ಹಲವಾರು ವಿಷಯದಲ್ಲಿ ನಾವು ಪ್ರಗತಿಯಲ್ಲಿದ್ದರೂ ವೈಯಕ್ತಿಕವಾಗಿ ಫಲಿತಾಂಶ ದಾಖಲಿಸಲು ಸಾಧ್ಯವಾಗುತ್ತಿಲ್ಲ. ಈ ಬಾರಿ ಎಲ್ಲರ ಸಹಕಾರದಿಂದ ಫಲಿತಾಂಶವನ್ನು ಉತ್ತಮ ಪಡಿಸಲು ಎಲ್ಲಾ ಆಯಾಮಗಳಲ್ಲಿ ಕಾರ್ಯನಿರ್ವಹಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಶ್ವತ ದತ್ತಿನಿಧಿ ದಾನಿಗಳಾದ ಶಶಿಕಲಾಸುರೇಶ್‌ಬಾಬು, ಕಾಲೇಜು ಅಭಿವೃದ್ದಿ ಸಮಿತಿ ಸದಸ್ಯರಾದ ಟಿ.ರುದ್ರಮುನಿ, ಗುರುನಾಥಗುಪ್ತ, ಕೋಣಪ್ಪ, ಉಪನ್ಯಾಸಕರಾದ ಕೆ.ಚಂದ್ರಶೇಖರ್, ನಾಗರಾಜಬೆಳಗಟ್ಟ, ಜಬೀವುಲ್ಲಾ, ಲಲಿತಮ್ಮ, ಹಬೀಬುಲ್ಲಾ, ಮಾಜಿ ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಲಕ್ಷ್ಮಣ್ ಮುಂತಾದವರು ಉಪಸ್ಥಿತರಿದ್ದರು.

# ರೈತರೊಂದಿಗೆ ಸದಾ ಜೊತೆಯಲ್ಲಿರುವೆ: ಶಾಸಕ

## ಎಲ್ಲಾ ಕೆರೆಗಳಿಗೆ ನೀರು ತುಂಬಿಸುವುದೇ ನನ್ನ ಗುರಿ: ಶಾಸಕರಾದ ಬಸವರಾಜು ವಿ ಶಿವಗಂಗಾ

» ಚನ್ನಗಿರಿ

ನಾನು ಮೊದಲಿಂದಲೂ ರೈತರ ಪರವಾಗಿ ಹೋರಾಟ ಮಾಡುತ್ತಾ ಬಂದಿರುವೆ, ಅವರ ಸಂಕಷ್ಟಕ್ಕೆ ಸದಾ ಸ್ಪಂದಿಸುವೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು.

ತಾಲ್ಲೂಕಿನಮುಗಳಿಹಳ್ಳಿಬಳಿಸೋಮನಾಯ್ಕನ ಕಟ್ಟೆಗೆ ಬಾಗಿನ ಅರ್ಪಿಸಿ ಈ ವಿಷಯ ತಿಳಿಸಿದರು. ನಾನು ಅಧಿಕಾರ ಅನುಭವಿಸಲು ಬಂದವನಲ್ಲಾ ಈ ತಾಲ್ಲೂಕಿನ ಮನೆ ಮಗನಾಗಿ ನಿಮ್ಮ ಋಣ ತೀರಿಸಲು ಸೇವೆ ಮಾಡಲು ಬಂದಿರುವ ಸೇವಕ ಎಂದರು, ನಾನು ಶಾಸಕನಾಗಿ ಆಯ್ಕೆಯಾಗುವ ಮೊದಲೇ ಜನರ ಸಹಯೋಗದಲ್ಲಿ ನನ್ನ ಸ್ವಂತ ಹಣದಲ್ಲಿ ಕೆರೆಗಳನ್ನ ತುಂಬಿಸಿರುವೆ, ಇದೀಗ

ಈ ಎಲ್ಲಾ ಕೆರೆಗಳನ್ನು ತುಂಬಿಸಿ ನಿನಗೆ ನೀರಿನ ಸಮಸ್ಯೆ ತಪ್ಪಿಸಿ ಶಾಶ್ವತವಾಗಿ ಅನುಕೂಲವಾಗುವಂತೆ ಮಾಡಲು ಪ್ರಯತ್ನಿಸುವೆ ಎಂದರು. ಮುಂದಿನ ದಿನಗಳಲ್ಲಿ ಗಂಗಾವತರಣವಾಗಿ, ರೈತರ ಬಾಳು ಸಂತೋಷವಾಗಿಲು ಎಷ್ಟೇ ಕಷ್ಟ ಬಂದರು ಕೆರೆಗಳನ್ನು ತುಂಬಿಸುವುದೇ ನನ್ನ ಗುರಿ ಎಂದರು.ಭೂಮಂಡಲದ ಸಕಲ ಜೀವ-ಸಸ್ಯ ರಾಶಿಗಳಿಗೆ ನೀರೇ ಮೂಲಾಧಾರ. ಅನಾದಿ ಕಾಲದಿಂದ ನಾಗರಿಕತೆಗಳು ಬೆಳೆದಂತೆ ನೀರಿನ ಜೊತೆ ಮಾನವನ ನಿಕಟ ಸಂಬಂಧ ಬೆಳೆಯುತ್ತಲೇ ಬಂದಿದೆ. ಮಳೆ ಆಶ್ರಯದ ಕೃಷಿಗೆ ಮಳೆಯ ವೈಫಲ್ಯತೆ ಕಂಡಾಗ ಕೆರೆ ಕಟ್ಟೆಗಳ ಆಶ್ರಯವಾಗುತ್ತಿದ್ದವು.



ಪೂರ್ವಿಕರು ಕಟ್ಟಿದ ಕೆರೆಗಳ ಹಿಂದೆ ಸಾಮಾಜಿಕ, ಧಾರ್ಮಿಕ, ಆರ್ಥಿಕ ಸಂಬಂಧಗಳು ಇವೆ. ಬಯಲು ಸೀಮೆಯಲ್ಲಿ ನಿರ್ಮಿಸಿದ ಕೆರೆಗಳು ಹೆಚ್ಚು ನೀರನ್ನು ಸಂಗ್ರಹಿಸಿ, ಸಾವಿರಾರು ಎಕರೆ ಪ್ರದೇಶಕ್ಕೆ ನೀರುಣಿಸುವ ಕೆಲಸ ಮದುವೆ, ನಿಮ್ಮೆಲ್ಲರ ಸಹಕಾರವಿರಲಿ,

ಆಧುನಿಕ ಕೃಷಿಗೆ ನಾವು ಒತ್ತುಕೊಟ್ಟು ಸಮಸ್ಯೆಗಳ ಸುಳಿಯಲ್ಲಿ ಸಿಲುಕಿದ್ದೇವೆ. ಈ ಸಮಸ್ಯೆಯಿಂದ ಮುಕ್ತಿ ಹೊಂದಲು ನೀರೆ ನಮಗೆ ಆಧಾರವಾಗಿದೆ. ಈ ನಿಟ್ಟಿನಲ್ಲಿ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ವಿಶೇಷ ಒತ್ತು ನೀಡಲಾಗಿದೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಈ ವೇಳೆ ಮುಗಳಿಹಳ್ಳಿ ಸೇರಿದಂತೆ ಹಲವು ಗ್ರಾಮದ ರೈತರು ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

# ಮೊದೂರು ಆಂಜನೇಯ ಸ್ವಾಮಿ ದೇವಸ್ಥಾನ ಕಳಸ ಪ್ರತಿಷ್ಠಾಪನೆ



» ಪರಶುರಾಂಪುರ

ಹೋಬಳಿ ವ್ಯಾಪ್ತಿಯ ಮೊದೂರು ಗ್ರಾಮದ ಶ್ರೀ ಆಂಜನೇಯ ಸ್ವಾಮಿಯ ದೇವಸ್ಥಾನ ಕಳಸ ಪ್ರತಿಷ್ಠಾಪನೆ ಹಾಗೂ ವಿವಿಧ ಧಾರ್ಮಿಕ ಮಹೋತ್ಸವ ಕಾರ್ಯಕ್ರಮ ಸಂಪನ್ನಗೊಂಡವು.

ಶನಿವಾರ ದೇವಸ್ಥಾನದಲ್ಲಿ ನಡೆದ ಪೂಜಾ ಕೈಂಕರ್ಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹಾಗೂ ಶಾಸಕ ಟಿ.ರಘುಮೂರ್ತಿ ಪಾಲ್ಗೊಂಡು ದೇವರ ಆಶೀರ್ವಾದ ಪಡೆದರು.

ಸಚಿವ ಸುಧಾಕರ ಮಾತನಾಡಿ , ಬ ಹಬ್ಬ ಹರಿದಿನಗಳ ಜತೆ ಇಲ್ಲಿನ ದೇವಸ್ಥಾನಗಳ ಐತಿಹಾಸಿಕ ಹಿನ್ನಲೆವುಳ್ಳುವುದರ ಜತೆ ಪ್ರಾಮುಖ್ಯತೆ ಪಡೆದಿರುವುದು ಕಾಣಬಹುದಾಗಿದೆ ಎಂದು ತಿಳಿದಿರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ , ಬಯಲು ಸೀಮೆಯು ಸಾಂಸ್ಕೃತಿಕ ಹಿನ್ನಲೆಯ ಜತೆ ಐತಿಹಸಿಕ ಪುರಾವೆಗಳೊಂದಿಗೆ ಜನರ ಶ್ರದ್ಧಾ ಭಕ್ತಿಗಳೊಂದಿಗೆ ಆಚರಣೆ ಮಾಡುತ್ತಿರುವುದನ್ನ ಇಂದಿಗೂ ಕಾಣಬಹುದು ಎಂದರು. ಕಳೆದ ದಿನಗಳಿಂದ ದೇವಸ್ಥಾನದಲ್ಲಿ ವಿವಿಧ ಪೂಜೆಗಳ ಜತೆ ಸ್ವಾಮಿಯನ್ನ ಹೂ ಹಾಗೂ ಆಭರಣಗಳಿಂದ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು. ಈ ವೇಳೆಯಲ್ಲಿ ಮುಖಂಡರಾದ ಹೇಮಂತ್‌ರಾಜ್ , ರಂಗಪ್ಪ ,ನಾಗರಾಜ , ಮಂಜುನಾಥ , ಅಂಜನಮೂರ್ತಿ ಜತೆ ಮುಖಂಡರು , ಗ್ರಾಪಂ ಸದಸ್ಯರು ಮತ್ತು ಗ್ರಾಮಸ್ಥರಿದ್ದರು.

## ನ್ಯಾಮತಿಯಲ್ಲಿ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ನ್ಯಾಮತಿ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಜ.10 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕಾರಿಸುವರು. ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದಾಗಿದೆ.

## ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಯುವಜನರಿಗೆ ವಿವಿಧ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಜಿಮ್, ಫಿಟ್ನೆಸ್, ಬ್ಯೂಟೀಷಿಯನ್, ವೀಡಿಯೋಗ್ರಾಫಿ, ನಿರೂಪಣಾ ಮತ್ತು ವಾರ್ತಾ ವಾಚಕರ ತರಬೇತಿಗೆ ಅರ್ಜಿ ಸಲ್ಲಿಸಬಹುದು. ಆಸಕ್ತರುವಿವರಗಳಿಗೆ ದೂ.ಸಂ: 08192-237480 ಸಂಪರ್ಕಿ ಸಲು ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಪಾರ್ಶ್ವನಾಥ ವಿದ್ಯಾಸಂಸ್ಥೆಯ ಸುವರ್ಣ ಮಹೋತ್ಸವ

» ಚಿತ್ರದುರ್ಗ

ವ್ಯಾಪಾರಕ್ಕೆ ಹೆಸರುವಾಸಿಯಾಗಿರುವ ಜೈನ ಸಮುದಾಯ ಈ ಭಾಗದಲ್ಲಿ ನೆಲೆಯೂರಿ ಐವತ್ತು ವರ್ಷಗಳ ಹಿಂದೆಯೇ ಶಿಕ್ಷಣ ಸಂಸ್ಥೆ ತೆರೆದು ಬಡ ಮಕ್ಕಳಿಗೆ ವಿದ್ಯೆ ನೀಡುವ ಅದ್ಭುತ ಕೆಲಸ ಮಾಡುತ್ತಿದೆ ಎಂದು ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮೆಚ್ಚುಗೆ ವ್ಯಕ್ತಪಡಿಸಿದರು.



ನಗರದ ಹಳೆ ಮಾಧ್ಯಮಿಕ ಶಾಲಾ ಆವರಣದಲ್ಲಿ ಭಾನುವಾರ ಪಾರ್ಶ್ವನಾಥ ವಿದ್ಯಾಸಂಸ್ಥೆಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಐವತ್ತು ವರ್ಷಗಳ ಹಿಂದೆ ಜೈನ ಸಮುದಾಯದ ಹಿರಿಯರು ಭದ್ರ ಬುನಾದಿ ಹಾಕಿದ್ದರ ಫಲವಾಗಿ ಪಾರ್ಶ್ವನಾಥ ವಿದ್ಯಾಸಂಸ್ಥೆ ಕಡಿಮೆ ಶುಲ್ಕ ಪಡೆದು ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದೆ. ಇಂಗ್ಲಿಷ್ ಮಾಧ್ಯಮದ ಜೊತೆ ಭಾರತದ ಸಂಸ್ಕೃತಿಯನ್ನು ಉಳಿಸಿ ಮಕ್ಕಳಲ್ಲಿ ಸಂಸ್ಕಾರವನ್ನು ಕಲಿಸುತ್ತಿರುವುದು ಸುಲಭವಲ್ಲ ಎಂದು ಶ್ಲಾಘಿಸಿದರು.

ದೇಶದ ಪ್ರಧಾನಿ ಮೋದಿ ಕರೆಯಂತೆ ಭೇಟಿ ಬಚಾವೋ ಭೇಟಿ ಪಡಾವೋ ಹೆಣ್ಣು ಮಕ್ಕಳಿಗಾಗಿ ಪಿ.ಯು.ಸಿ. ತೆರೆಯಲು ಮುಂದಾಗಿದ್ದು, ಅನುಮತಿ ಸಿಕ್ಕಿದೆ. ಶೀಘ್ರವೇ ಪಿ.ಯು.ಕಾಲೇಜು ಆರಂಭಿಸಲು ಸರ್ಕಾರ ಮಟ್ಟದಿಂದ ಆಗಬೇಕಾದ ಕೆಲಸಕ್ಕೆ ಪ್ರಾಮಾಣಿಕವಾಗಿ ಕೈಜೋಡಿಸುವ ಭರವಸೆ ನೀಡಿದ ಕೆ.ಎಸ್.ನವೀನ್ ಶಿಕ್ಷಣದ ಜೊತೆ ಮಕ್ಕಳಿಗೆ ಸಂಸ್ಕಾರ, ಮಾನವೀಯತೆ, ಗುರು-ಹಿರಿಯರನ್ನು ಗೌರವಿಸುವುದನ್ನು ಕಲಿಸಬೇಕು ಎಂದು ಹೇಳಿದರು.

ಹೆಚ್ಚು ಶಿಕ್ಷಣ ಪಡೆದವರು ಅಂಧಕಾರದಲ್ಲಿ ಬದುಕುತ್ತಿದ್ದಾರೆ. ಅಹಿಂಸಾ ಗುಣ ಜೈನರಲ್ಲಿದೆ. ಮಕ್ಕಳಲ್ಲಿ ದೇಶಭಕ್ತಿಯನ್ನು ಶಿಕ್ಷಣ ಸಂಸ್ಥೆಗಳು ಮೂಡಿಸಬೇಕು ಎಂದರು.ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ ಮಾತನಾಡಿ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರು ನೀಡಿರುವ ಸಮಾನತೆಯಿಂದ ಪ್ರತಿಯೊಬ್ಬರು ಶಿಕ್ಷಣ ಪಡೆಯುವಂತಾಗಿದೆ. ಶಿಕ್ಷಣ ಕೇವಲ ಅಂಕಗಳಿಗಷ್ಟೆ ಸೀಮಿತವಾಗಿರಬಾರದು. ಆತ್ಮವಿಶ್ವಾಸದಿಂದ ಬದುಕುವ ಶಿಕ್ಷಣ ನೀಡಿದಾಗ ಮಾತ್ರ ಜೀವನದಲ್ಲಿ ಎಂತಹ ಕಷ್ಟದ ಸನ್ನಿವೇಶ ಎದುರಾದರೂ ಧೃತಿಗೆಡದೆ ಬದುಕಬಹುದು ಎಂದು ತಿಳಿಸಿದರು.

ದೇಶದಲ್ಲಿ ವಿಚಿದ್ರಕಾರಕ ಶಕ್ತಿಗಳು ಹೆಚ್ಚುತ್ತಿವೆ. ಶಿಕ್ಷಕರು, ಪೋಷಕರುಗಳು ಮಕ್ಕಳಿಗೆ ಊರುಗೋಲಾಗಿ ನಿಲ್ಲಬೇಕು. ಪಾರ್ಶ್ವನಾಥ ವಿದ್ಯಾಸಂಸ್ಥೆಗೆ ತ್ಯಾಗದ ಗುಣವಿದೆ. ಕಠಿಣ ಪರಿಶ್ರಮದಿಂದ ಮಕ್ಕಳು ಓದಿದಾಗ ಮುಂದೆ ಜೀವನದಲ್ಲಿ ಸುಖವಾಗಿರಬಹುದು ಎಂದು ಕಿವಿಮಾತು ಹೇಳಿದರು.

ಸುವರ್ಣ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ವಿಗ್ಯಾನಪ್ರಭಾ ಸುರೀಶ್ವರ್‌ಜಿ ಆಶೀರ್ವಚನ ನೀಡುತ್ತ ಶಿಕ್ಷಣದಿಂದ ಮಾತ್ರ ಅಜ್ಞಾನದಿಂದ ಹೊರಬರಬಹುದು. ವಿವೇಕವಿಲ್ಲದವರ ಜೀವನ ಪಶು ಪ್ರಾಣಿಗಳಿಗಿಂತಲೂ ಕಡೆಯಾಗಿರುತ್ತದೆ. ಪ್ರತಿ ಮಗುವು ಶಿಕ್ಷಣ ಪಡೆದು ಅಂಧಕಾರದಿಂದ ಹೊರಬರಬೇಕು ಎಂದು ತಿಳಿಸಿದರು. ಪಾರ್ಶ್ವನಾಥ ವಿದ್ಯಾಸಂಸ್ಥೆಯ ಅಧ್ಯಕ್ಷ ಬಾಬುಲಾಲ್‌ಜೀ ಪಟಿಯಾತ್ ಅಧ್ಯಕ್ಷತೆ ವಹಿಸಿದ್ದರು.

ಕ್ಷೇತ್ರಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಅರಿಷ್ಟರ ರತ್ನಶ್ರಿಜೀ, ರಂಜಿತ್ ಪಟಿಯತ್, ಜುಟ್‌ಮಲ್‌ಜಿ, ಬಿಜೆಪಿ.ಯುವ ಮುಖಂಡ ಹನುಮಂತೇಗೌಡ, ವಿದ್ಯಾಸಂಸ್ಥೆಯ ಉಪಾಧ್ಯಕ್ಷ ಉತ್ತಮ್‌ಚಂದ್ ಸುರಾನ, ಕಾರ್ಯದರ್ಶಿ ಸುರೇಶ್‌ಕುಮಾರ್, ಜಂಟಿ ಕಾರ್ಯದರ್ಶಿ ಸುರೇಶ್ ಮುತ್ತ, ಖಜಾಂಚಿ ರಾಜೇಂದ್ರ ದಲೇಶ, ನಿರ್ದೇಶಕರುಗಳಾದ ಮುಕೇಶ್ ಸೋನ್‌ವಾಡಿಯ, ಬಿ.ಸುರೇಶ್ ಪಟಿಯಾತ್, ವಿಫುಲ್ ಜೈನ್, ಜವೇರಿಲಾಲ್, ಮಹಾವೀರ್ ದರ್‌ಲೇಶ, ಆಶಿಕ್‌ಕುಮಾರ್ ವೇದಿಕೆಯಲ್ಲಿದ್ದರು.

ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

## ಫಾಸ್ಟ್ ನ್ಯೂಸ್

### ಶಾಕ್ತ ಪರಂಪರೆ ಮಹಾಪ್ರಬಂಧ: ಶ್ರೀಧರಮೂರ್ತಿಗೆ ಡಾಕ್ಟರೇಟ್

» ಚಿತ್ರದುರ್ಗ



ಶಾಕ್ತ ಪರಂಪರೆ ಕುರಿತು ಚಿತ್ರದುರ್ಗ ತಾಲ್ಲೂಕು ಭರಮಸಾಗರ ಗ್ರಾಮದ ಕೆ.ಯು.ಶ್ರೀಧರಮೂರ್ತಿ ಅವರ ಸಂಶೋಧನಾ ಮಹಾಪ್ರಬಂಧಕ್ಕೆ ಹಂಪಿ ವಿಶ್ವ ವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿದೆ. ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಬುಡಕಟ್ಟು ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಗಂಗಾಧರ ದೈವಜ್ಞ ಅವರ ಮಾರ್ಗದರ್ಶನದಲ್ಲಿ ಕೆ.ಯು.ಶ್ರೀಧರಮೂರ್ತಿ ಆಳವಾದ ಸಂಶೋಧನೆ ನಡೆಸಿ "ಪ್ರಾಚೀನ ಕರ್ನಾಟಕದಲ್ಲಿ ಶಾಕ್ತ ಪರಂಪರೆ" ಎನ್ನುವ ಶೀರ್ಷಿಕೆ ಅಡಿ ಮಹಾಪ್ರಬಂಧ ರಚಿಸಿ, ವಿಶ್ವ ವಿದ್ಯಾಲಯದ ಶಾಸನಶಾಸ್ತ್ರ ವಿಭಾಗಕ್ಕೆ ಸಲ್ಲಿಸಿದ್ದರು. ಆರಂಭದಲ್ಲಿ ಶಾಸನ ವಿಭಾಗದ ಮುಖ್ಯಸ್ಥರಾಗಿದ್ದ ಡಾ.ಕಲವೀರ ಮನ್ವಚಾರ್ ಮಾರ್ಗದರ್ಶನದಲ್ಲಿ ಶಾಕ್ತ ಪರಂಪರೆಯ ಬಗ್ಗೆ ಶ್ರೀಧರಮೂರ್ತಿ ಅವರು ಸಂಶೋಧನೆಯನ್ನು ಆರಂಭಿಸಿದರು. ಕೋವಿಡ್ ಸಂದರ್ಭದಲ್ಲಿ ಡಾ.ಕಲವೀರ ಮನ್ವಚಾರ್ ಮರಣಿಸಿದ್ದರಿಂದ, ಬುಡಕಟ್ಟು ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಗಂಗಾಧರ ದೈವಜ್ಞ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಮುಂದುವರಿಸಿದರು. ಪ್ರಸ್ತುತ ಶಾಸನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಅಮರೇಶ್ ಯತಗಲ್ ಅವರು ಸಂಶೋಧನಗೆ ಸೂಕ್ತ ಸಲಹೆಗಳು ನೀಡಿ ಪ್ರೋತ್ಸಾಹಿಸಿದರು. ಶಾಕ್ತ ಪರಂಪರೆ ಎನ್ನುವ ವಿನೂತನ ವಿಷಯ ಕುರಿತು ಸಂಶೋಧನಾ ಪ್ರಬಂಧ ರಚಿಸಲು ಮೂವರು ಪ್ರಾಧ್ಯಾಪಕರು ನೀಡಿದ ಮಾರ್ಗದರ್ಶನವನ್ನು ಕೆ.ಯು.ಶ್ರೀಧರಮೂರ್ತಿಗೆ ಈ ಸಂದರ್ಭದಲ್ಲಿ ಸ್ಮರಿಸಿದ್ದಾರೆ.

### ಕ್ಷಯ ಮುಕ್ತ ತಾಲ್ಲೂಕನ್ನಾಗಿಸಲು ಎಲ್ಲರೂ ಸಹಕರಿಸಿ: ಸುಧಾ



» ಚಳ್ಳಕೆರೆ

ಸಾಮಾನ್ಯವಾಗಿ ಮನುಷ್ಯನಿಗೆ ಆತನಿಗೆ ಅರಿವಿಲ್ಲದಂತೆ ಅನೇಕ ರೋಗಗಳು ವ್ಯಾಪಿಸುತ್ತವೆ. ಪ್ರಸ್ತುತ ಇಂದಿನ ಸ್ಥಿತಿಯಲ್ಲಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದೇ ಸವಾಲಾಗಿ ಪರಿಣಮಿಸಿದೆ. ಆದರೂ ಸಹ ಆರೋಗ್ಯ ಇಲಾಖೆ ರೋಗಗಳ ನಿಯಂತ್ರಣ ಹಾಗೂ ಜಾಗೃತಿ ಕುರಿತು ಅನೇಕ ಕಾರ್ಯಕ್ರಮಗಳ ಮೂಲಕ ರೋಗಗಳ ನಿಯಂತ್ರಣಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಕ್ಷಯರೋಗವನ್ನು ಸಹ ನಿಯಂತ್ರಿಸುವಲ್ಲಿ ಇಲಾಖೆ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಸುಧಾ ತಿಳಿಸಿದರು. ಅವರು, ಸೋಮವಾರ ತಾಲ್ಲೂಕಿನ ಗಡಿಭಾಗದಲ್ಲಿರುವ ಓಬಳಾಪುರ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕ್ಷಯ ರೋಗ ನಿರ್ಮೂಲನಾ ದಿನಾಚರಣೆ ಹಾಗೂ ಕ್ಷಯ ರೋಗ ಪೀಡಿತರಿಗೆ ಲಕ್ಷ್ಮಣ್ ಟ್ರಸ್ಟ್ ನೀಡಿದ ಪೌಷ್ಠಿಕಾಂಶಗಳ ಆಹಾರವುಳ್ಳ ಕಿಟ್ ವಿತರಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಉಚಿತ ಕಿಟ್ ನೀಡಿದ ದಿವಂಗತ ಲಕ್ಷ್ಮಣ್ ಟ್ರಸ್ಟ್‌ನ ಮುಖ್ಯಸ್ಥರಾದ ಎಲ್.ನರಸಿಂಹಪ್ಪ ಹಾಗೂ ಕುಮಾರ್‌ರವರ ಸೇವೆಯನ್ನು ಪ್ರಶಂಸಿಸಿದರು.

ತಾಲ್ಲೂಕು ಮೇಲ್ವಿಚಾರಕ ರಾಘವೇಂದ್ರ ಮಾತನಾಡಿ, ಚಳ್ಳಕೆರೆ ತಾಲ್ಲೂಕನ್ನು ಕ್ಷಯರೋಗ ಮುಕ್ತ ತಾಲ್ಲೂಕಕ್ಕಾನಿ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಘಟಕ ಹಲವಾರು ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ನೆರವಾಗುತ್ತಿದೆ. ಕ್ಷಯರೋಗ ಪೀಡಿತನಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಔಷಧಗಳನ್ನು ನೀಡಲಾಗುತ್ತಿದೆ. ಕ್ಷಯರೋಗ ಪೀಡಿತರು ಪೌಷ್ಠಿಕಾಂಶ ಆಹಾರ ಸೇವಿಸಿದರೆ ಬೇಗ ಗುಣಮುಖರಾಗಬಹುದು ಎಂದರು. ಕಾರ್ಯಕ್ರಮದಲ್ಲಿ ಓಬಳಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಕವಿತಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಂಜನಿಕಾಂತ್, ಗ್ರಾಮದ ಮುಖಂಡರಾದ ಈಶ್ವರಪ್ಪ, ಕುಮಾರ್, ಡಾ.ಮನ್ಸೂರ್ ಆಹಮ್ಮದ್, ಮುಖ್ಯ ಶಿಕ್ಷಕ ಮೃತ್ಯಂಜಯ, ಗ್ರಾಮಸ್ಥರು, ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

### ಬಿಲ್ಡಿಂಗ್ ಬೈಲಾಗಳಿಗೆ ಸಲಹೆ, ಆಕ್ಷೇಪಣೆಗೆ ಅರ್ಜಿ

» ದಾವಣಗೆರೆ

ದಾವಣಗೆರೆ ನಗರದ ಪ್ರಸ್ತುತ ಅಭಿವೃದ್ಧಿ ಬೆಳವಣಿಗೆಗೆ ಅನುಗುಣವಾಗಿ ಕಟ್ಟಡಗಳ ಅಭಿವೃದ್ಧಿ ಪ್ರಾಸ್ತಾವನೆಗಳು, ಉದ್ದೇಶ ಮತ್ತು ನಿಬಂಧನೆಗಳಿಗೆ ಅನ್ವಯ ಬಿಲ್ಡಿಂಗ್ ಬೈಲಾ 2024 ಅಂತಿಮ ಅನುಮೋದನೆ ಪಡೆಯುವ ಸಂಬಂಧ ಸರ್ಕಾರಕ್ಕೆ ಸಲ್ಲಿಸಬೇಕಾಗಿದೆ.

# ಅಮೃತ್ ಯೋಜನೆಯಡಿ ರೈಲ್ವೇ ನಿಲ್ದಾಣಗಳು ಮೇಲ್ದರ್ಜೆಗೆ: ಕೇಂದ್ರ ಸಚಿವ ಎ.ನಾರಾಯಣ ಸ್ವಾಮಿ

» ಚಿತ್ರದುರ್ಗ

ಚಿತ್ರದುರ್ಗ, ಚಳ್ಳಕೆರೆ ಹಾಗೂ ಚಿಕ್ಕಜಾಜೂರು ರೈಲ್ವೆ ನಿಲ್ದಾಣಗಳನ್ನು ಅಮೃತ್ ಯೋಜನೆಯಡಿ ಮೇಲ್ದರ್ಜೆಗೇರಿಸಲಾಗುವುದು ಎಂದು ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಹಾಗೂ ಸಬಲೀಕರಣ ಇಲಾಖೆ ರಾಜ್ಯ ಖಾತೆ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ಸೋಮವಾರ ಚಿತ್ರದುರ್ಗ ರೈಲ್ವೇ ನಿಲ್ದಾಣಕ್ಕೆ ಭೇಟಿ ನೀಡಿ, ನೀಲನಕ್ಷೆ ಹಾಗೂ ಕಾಮಗಾರಿ ಸ್ಥಳ ವೀಕ್ಷಿಸಿ, ಅಮೃತ್ ಯೋಜನೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಅಂದಾಜು 16 ಕೋಟಿ ರೂ. ವೆಚ್ಚಕ್ಕೆ ಟೆಂಡರ್ ಕರೆಯಲಾಗಿದೆ. ಚಿತ್ರದುರ್ಗ ರೈಲು ನಿಲ್ದಾಣದಲ್ಲಿ ದಾವಣಗೆರೆ–ತುಮಕೂರು ನೇರ ರೈಲ್ವೇ ಯೋಜನೆಯಲ್ಲಿ ಕಾಮಗಾರಿಗಳನ್ನು ಹೊರತುಪಡಿಸಿ, ಅಮೃತ್ ಯೋಜನೆಯಡಿ ಮೂಲಭೂತ ಸೌಕರ್ಯ ಹಾಗೂ ಆಡಳಿತಾತ್ಮಕ ಕಚೇರಿಯನ್ನು ನಿರ್ಮಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರ ಕನಸಿನಂತೆ ಅಂತರಾಷ್ಟ್ರೀಯ ಮಟ್ಟದ ರೈಲ್ವೇ ನಿಲ್ದಾಣ ನಿರ್ಮಿಸಲಾಗುವುದು. ರೂ. 02.36 ಕೋಟಿ ವೆಚ್ಚದಲ್ಲಿ ಚಳ್ಳಕೆರೆ ರೈಲ್ವೇ ಫ್ಲಾಟ್ ಫಾರಂ ಅಭಿವೃದ್ಧಿ ಪಡಿಸಲಾಗುತ್ತಿದೆ. ಮೈಸೂರಿನಲ್ಲಿ



ನಡೆದ ರೈಲ್ವೆ ಯೋಜನೆ ಪ್ರಗತಿ ಪರಿಶೀಲನೆ ಸಭೆಯಲ್ಲಿ, ಜಿಲ್ಲೆಯ ರೈಲ್ವೇ ನಿಲ್ದಾಣ ಅಭಿವೃದ್ಧಿಗೆ ಸುಮಾರು ರೂ.18 ಕೋಟಿ ಬಿಡುಗಡೆಯಾಗಿದೆ. ಕಾಮಗಾರಿಗಳನ್ನು ಆರಂಭಿಸುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದ್ದರು. ಈ ಹಿನ್ನಲೆಯಲ್ಲಿ ಜನಪ್ರತಿನಿಧಿಗಳೊಂದಿಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇನೆ. ಶೀಘ್ರವೇ ಅಮೃತ್ ಯೋಜನೆಗೆ ಪ್ರಧಾನ ಮಂತ್ರಿಗಳು ಚಾಲನೆ ನೀಡುವರು ಎಂದು ಸಚಿವ ಎ.ನಾರಾಯಣಸ್ವಾಮಿ ತಿಳಿಸಿದರು.ನೇರ ರೈಲು ಯೋಜನೆಗೆ ಟೆಂಡರ್ : ಈ ಭಾಗದ ಜನರ ಬಹುದಿನದ ಬೇಡಿಕೆಯಾದ ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆಗೆ ಕೇಂದ್ರ ಸರ್ಕಾರ 1,900 ಕೋಟಿ ರೂ. ಮಂಜೂರು ಮಾಡಿದೆ. ದಾವಣಗೆರೆ–ಚಿತ್ರದುರ್ಗ–ಹಿರಿಯೂರು ಭಾಗದಲ್ಲಿ ಈಗಾಗಲೇ ರೈಲ್ವೇ ಯೋಜನೆಗೆ ಅಗತ್ಯವಾದ ಶೇ.82 ರಷ್ಟು ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಯೋಜನೆಯ ಟೆಂಡರ್ ಪ್ರಕ್ರಿಯೆ ಆರಂಭಿಸಲು ಶೇ.90 ರಷ್ಟು ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರಬೇಕು. ಈ ಹಿನ್ನಲೆಯಲ್ಲಿ ಮುಂದಿನ ವಾರದಲ್ಲಿ ಶೇ.8 ರಷ್ಟು ಭೂ ಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ರೈಲ್ವೇ ಇಲಾಖೆಗೆ ನೀಡಲಾಗುವುದು. ಮುಂದಿನ ತಿಂಗಳ ವೇಳೆಗೆ ಯೋಜನೆ ಟೆಂಡರ್ ಪ್ರಕ್ರಿಯೆ ಆರಂಭಗೊಳ್ಳುವುದಾಗಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಭರವಸೆ ವ್ಯಕ್ತಪಡಿಸಿದರು.ದಾವಣಗೆರೆ–ಭರಮಸಾಗರ ನಡುವಿನ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡು ಈ ಭಾಗದ ಯೋಜನೆಗೆ ಚಾಲನೆ ನೀಡಲಾಗಿದೆ. ಭರಮಸಾಗರ–ಚಿತ್ರದುರ್ಗ ನಡುವಿನ ಭೂ ಸ್ವಾಧೀನಪಕ್ರಿಯೆಯೂಮುಗಿಯುವಹಂತಕ್ಕೆ ಬಂದಿದ್ದು, ಭರಮಸಾಗರ–ಚಿತ್ರದುರ್ಗ ನಡುವಿನ ರೈಲ್ವೇ ಯೋಜನೆಯನ್ನು ಸಹ ಆದಷ್ಟು ಶೀಘ್ರ ಆರಂಭಿಸುವುದಾಗಿ ಕೇಂದ್ರ ಸಚಿವ ನಾರಾಯಣಸ್ವಾಮಿ ತಿಳಿಸಿದರು.

ಚಿತ್ರದುರ್ಗ ರೈಲ್ವೇ ನಿಲ್ದಾಣವನ್ನು ನೇರ ರೈಲ್ವೇ ಯೋಜನೆಯಡಿ ನೂತನವಾಗಿ ನಿರ್ಮಿಸಲಾಗುವುದು. ಈ ಹಿನ್ನಲೆಯಲ್ಲಿ ನೇರ ರೈಲ್ವೇ ಯೋಜನೆಯ ಕಾಮಗಾರಿಗೆ ಚ್ಯುತಿ ಹಾಗೂ ಅಡಚಣೆ ಉಂಟಾಗದಂತೆ ಅಮೃತ್ ಯೋಜನೆಯಡಿ ಆಡಳಿತ ಕಚೇರಿಯ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯ ಯೋಜನಾ ವ್ಯವಸ್ಥಾಪಕ ಆನಂದ ಭಾರತಿ ಸಚಿವರಿಗೆ ತಿಳಿಸಿದರು.

ಸದ್ಯ ಚಿತ್ರದುರ್ಗ ರೈಲ್ವೇ ನಿಲ್ದಾಣದ ಒಂದನೇ ಪ್ಲಾಟ್ ಫಾರಂನಲ್ಲಿ ಮಾತ್ರ ಪ್ರಯಾಣಿಕ ರೈಲುಗಳು ಕಾರ್ಯಚರಣೆ ನಡೆಸುತ್ತಿವೆ. 2ನೇ ಫ್ಲಾಟ್ ಫಾರಂ ಇಲ್ಲದ ಕಾರಣಓವರ್‌ಬ್ರಿಡ್ಜ್‌ನಿರ್ಮಿಸಿಲ್ಲ.ಮೂರನೇ ರೈಲ್ವೇ ಹಳಿಯಲ್ಲಿ ಗೂಡ್ಸ್‌ರೈಲುಗಳು ಮಾತ್ರ ಕಾರ್ಯಚರಣೆ ನಡೆಸುತ್ತಿವೆ. ನೇರ ರೈಲ್ವೇ ಮಾರ್ಗ ಯೋಜನೆಯಲ್ಲಿ ಸಂಪೂರ್ಣವಾಗಿ ರೈಲ್ವೆ ನಿಲ್ದಾಣವನ್ನು ನಿರ್ಮಾಣ ಮಾಡಲಿದ್ದು, ಆ ಸಂದರ್ಭದಲ್ಲಿ ಎರಡು ಫ್ಲಾಟ್ ಫಾರಂಗಳನ್ನು ನಿರ್ಮಿಸಿ, ಪ್ರಯಾಣಿಕರ ಅನುಕೂಲಕ್ಕೆ ಓವರ್ ಬ್ರಿಡ್ಜ್ ಸೌಲಭ್ಯ ಕಲ್ಪಿಸಲಾಗುವುದು ಎಂದು ರೈಲ್ವೆ ಅಧಿಕಾರಿಗಳು ಮಾಹಿತಿ ನೀಡಿದರು.

ಹಳೆಯ ಪಿ.ಬಿ. ರೋಡ್‌ನಲ್ಲಿ ರೈಲ್ವೇ ಗೇಟ್ ಬಳಿ ಬ್ರಿಡ್ಜ್ ನಿರ್ಮಿಸುವ ಕಾಮಗಾರಿಗೆ ಎನ್.ಓ.ಸಿ ನೀಡುವಂತೆ ರೈಲ್ವೇ ಅಧಿಕಾರಿಗಳು ಪತ್ರ ಬರೆದಿದ್ದು, ಶೀಘ್ರವೇ ಎನ್.ಓ.ಸಿ ನೀಡುವಂತೆ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಅವರಿಗೆ ಕರೆ ಮಾಡಿ ಸೂಚನೆ ನೀಡಿದರು.ಈ ಸಂದರ್ಭದಲ್ಲಿ ರೈಲ್ವೆ ಇಲಾಖೆಉಪವ್ಯವಸ್ಥಾಪಕರಾಮಸುಬ್ಬಯ್ಯ, ಡಿವಿಜಿನಲ್ ಕಮರ್ಷಿಯಲ್ ಮ್ಯಾನೇಜರ್ ಲೋಹಿತಾಶ್ವ, ಬ್ರಿಡ್ಜ್ ಡೆಪ್ಯೂಟಿ ಇಂಜಿನಿಯರ್ ಉನ್ನಿಕೃಷ್ಣನ್, ಸಹಾಯಕ ವಿಭಾಗೀಯ ಅಭಿಯಂತರ ನಿತ್ಯಾನಂದ ಸ್ವಾಮಿ, ಟ್ರಾಫಿಕ್ ಇನ್ಸ್‌ಪೆಕ್ಟರ್ ಬಿ.ಹನುಮಂತು, ಸ್ಟೇಷನ್ ಸೂಪರಿಡೆಂಟ್ ಇ.ಮಂಜುನಾಥ್, ಆರ್‌ಪಿಎಫ್ ಎಸ್‌ಐ ಜಯಣ್ಣ ಮಾಜಿ ಶಾಸಕ ನೇರ್ಲಗುಂಟೆ ತಿಪ್ಪೇಸ್ವಾಮಿ ಸೇರಿದಂತೆ ರೈಲ್ವೇ ಇಲಾಖೆ ಸಿಬ್ಬಂದಿ ಇದ್ದರು.

# ಮದ್ಯ, ಮಾದಕ ವ್ಯಸನಗಳ ವಿರುದ್ಧ ಜಾಗೃತಿ

» ಚಿತ್ರದುರ್ಗ

ನಶೆ ಮುಕ್ತ ಚಿತ್ರದುರ್ಗ ವಿಶೇಷ ಕಾರ್ಯಾಚರಣೆ ಹಿನ್ನಲೆಯಲ್ಲಿ ಮಾದಕ ವಸ್ತುಗಳ ಮಾರಾಟ, ಸೇವನೆಇತ್ಯಾದಿಗಳಿಂದಾಗುವದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಸಲುವಾಗಿ ಚಿತ್ರದುರ್ಗ ನಗರದಲ್ಲಿ ಸೋಮವಾರ ಜಾಗೃತಿ ಜಾಥಾ ನಡೆಯಿತು.

ಜಿಲ್ಲಾ ಪೊಲೀಸ್ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ವತಿಯಿಂದ ಸೋಮವಾರ ನಗರದ ಹೊಳಲ್ಕೆರೆ ರಸ್ತೆಯ ಕನಕ ವೃತ್ತದಿಂದ ಆರಂಭವಾದ ಮದ್ಯ ಮತ್ತು ಮಾದಕ ವ್ಯಸನಗಳ ಜಾಗೃತಿ ಜಾಥಾಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಚಾಲನೆ ನೀಡಿದರು.

ನಗರದ ಹೊಳಲ್ಕೆರೆ ರಸ್ತೆಯಿಂದ ಪ್ರಾರಂಭವಾದ ಜಾಗೃತಿ ಜಾಥಾ ಹಾಗೂ ನಡಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಮದಕರಿ ನಾಯಕರ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಜಾಗೃತಿ ಮೂಡಿಸಲಾಯಿತು.

ಬನ್ನಿ, ಚಿತ್ರದುರ್ಗ ಜಿಲ್ಲೆಯನ್ನು ನಶೆ ಮುಕ್ತಗೊಳಿಸಲು ನಮ್ಮೊಂದಿಗೆ ಕೈಜೋಡಿಸಿ, ನಿಮ್ಮ ಬದುಕು, ನಿಮ್ಮ ಕೈಯಲ್ಲಿ, ಮಾದಕ ವ್ಯಸನಗಳಿಂದ ದೂರ ಸರಿಯಿರಿ, ಮಾದಕ ವಸ್ತುಗಳ ಸೇವನೆ ಆರೋಗ್ಯಕ್ಕೆ ಹಾನಿಕಾರಕ, ಮಾದಕ ವಸ್ತುಗಳ ಮಾರಾಟ, ಸೇವನೆ ಇತ್ಯಾದಿ ಮಾಡಿದಲ್ಲಿ ಅತ್ಯಂತ ಕಠಿಣ ಶಿಕ್ಷೆ ಕಾದಿದೆ ಎಂಬುದು ತಿಳಿದಿರಲಿ, ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣ ಎಲ್ಲರ ಜವಾಬ್ದಾರಿ ಎಂಬ ಇತ್ಯಾದಿ ನಾಮಫಲಕಗಳು ಜಾಗೃತಿ ಜಾಥಾದಲ್ಲಿ ಗಮನಸೆಳೆದರು. ಜಾಥಾದಲ್ಲಿ ಕಾಲೇಜುಗಳ ವಿದ್ಯಾರ್ಥಿಗಳು, ನಾಗರಿಕರು, ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು.

ನಂತರ ಒನಕೆ ಓಬವ್ವ ವೃತ್ತದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ಸೇವನೆ ತಡೆಯಲು, ಯುವ ಜನರಲ್ಲಿ ಜಾಗೃತಿ ಮೂಡಿಸಲು ಹೆಚ್ಚಿನ ಅಭಿಯಾನಗಳನ್ನು ಆಯೋಜಿಸಲು ಚಿಂತನೆ ನಡೆಸಲಾಗಿದೆ ಎಂದು



ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.

ಕ್ಷಣಿಕ ಸುಖಕ್ಕಾಗಿ ಮಾದಕ ವಸ್ತುಗಳ ಸೇವನೆ ಮಾಡುವುದನ್ನು ಕೈಬಿಡಬೇಕು. ಇವುಗಳು ಮುಂದಿನ ಭವಿಷ್ಯ ಜೀವನದಲ್ಲಿ ಹಲವಾರು ತೊಂದರೆಗಳಿಗೆ ಕಾರಣವಾಗುತ್ತವೆ. ಆರೋಗ್ಯ ಹಾಳಾಗುತ್ತದೆ. ಮೆದಳು ಸಹ ಕೆಲಸ ಮಾಡದೆ ನಿಷ್ಕ್ರಿಯವಾಗಬಹುದು ಎಂದು ಅವರು ಹೇಳಿದರು.

ಜಿಲ್ಲಾಪೊಲೀಸ್‌ವರಿಷ್ಠಾಧಿಕಾರಿಧರ್ಮೇಂಧರ್ ಕುಮಾರ್ ಮೀನಾ ಮಾತನಾಡಿ, ಮಾದಕ ವಸ್ತುಗಳ ಸೇವನೆ ಗಂಭೀರ ಅಪರಾಧವಾಗಿದೆ. ಮಾದಕ ವಸ್ತುಗಳ ಸೇವನೆ, ಮಾರಾಟ, ಸಾಗಾಣಿಕೆ ಹಾಗೂ ಮಾದಕ ವಸ್ತು ಸೇವನೆಗೆ ಹಣ ನೀಡಿದರೂ ಎನ್.ಡಿ.ಪಿ.ಎಸ್ (THE NARCOTIC DRUGS AND PSYCHOTROPIC SUBSTANCES) ಕಾಯ್ದೆಯಡಿ ಅಪರಾಧವಾಗುತ್ತದೆ. ಈ ಕಾಯ್ದೆ ಕಠಿಣವಾಗಿದ್ದು, ವೈದ್ಯಕೀಯ ತಪಾಸಣೆ ಆಧರಿಸಿ ಎಫ್.ಐ.ಆರ್ ದಾಖಲಿಸಲಾಗುತ್ತದೆ. ಮಾದಕ ವಸ್ತು ಅಪರಾಧದಲ್ಲಿ ಸಿಲುಕಿಕೊಂಡರೆ ಖಂಡಿತವಾಗಿ ಶಿಕ್ಷೆ ಅನುಭವಿಸಬೇಕಾಗುತ್ತದೆ. ಇದರಿಂದ ಯುವ ಜನರ ಭವಿಷ್ಯಕ್ಕೆ ಮಾರಕವಾಗುತ್ತದೆ. ಪೊಲೀಸ್ ಇಲಾಖೆ ಕ್ರಿಮಿನಲ್ ರೆಕಾರ್ಡ್ ಆಗುವುದರಿಂದ ಉದ್ಯೋಗ ಸಂದರ್ಭದಲ್ಲಿ ಇದು ತಪಾಸಣೆಗೆ ಒಳಪಡುತ್ತದೆ. ಯುವಕರು ಎಚ್ಚರಿಕೆಯಿಂದ ಇದ್ದು ಮಾದಕ ವ್ಯಸನಗಳಿಂದ ದೂರ ಇರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರಕುಮಾರ್ ಮೀನಾ ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಅಬ್ದುಲ್ ಖಾದರ್, ಡಿಆರ್‌ಡಿಎಸ್‌ಪಿ ಗಣೇಶ್, ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ನಾಗರಾಜ್ ಸೇರಿದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಇದ್ದರು.

## ಮಾದಕ ಸೇವನೆ: ವಿದ್ಯಾರ್ಥಿಗಳು ಇಂತಹ ಚಟಗಳಿಂದ ದೂರವಿರಿ



» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ಹದಿಹರೆಯದ ವಯಸ್ಸಿನಲ್ಲೇ ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಯುವ ಜನಾಂಗ ಮಾದಕ ವ್ಯಸನಿಗಳಾಗಿ ಪರಿವರ್ತನೆಯಾಗುತ್ತಿದ್ದಾರೆ. ಪೊಲೀಸ್ ಇಲಾಖೆ ಈ ಬಗ್ಗೆ ಹಲವಾರು ಬಾರಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದರೂ ಸಹ ಇದು ನಿಯಂತ್ರಣವಾಗಿಲ್ಲ. ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ದೃಷ್ಠಿಯಿಂದ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಉಪವಿಭಾಗದ ಡಿವೈಎಸ್ಪಿ ಬಿ.ಟಿ.ರಾಜಣ್ಣ ತಿಳಿಸಿದರು.

ಅವರು, ಸೋಮವಾರ ಕಚೇರಿ ಮುಂಭಾಗದಲ್ಲಿ ಪೊಲೀಸ್ ಇಲಾಖೆ, ಗೃಹ ರಕ್ಷಕದಳ ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ದೂಮಪಾನ, ಮದ್ಯಪಾನದ ಜೊತೆಗೆ ಮಾದಕ ವ್ಯಸನಿಗಳಾಗುತ್ತಿರುವವರ ಸಂಖ್ಯೆ ದಿನೇದಿನೆ ಹೆಚ್ಚುತ್ತಿದ್ದು ಇದು ಸಮಾಜಕ್ಕೆ ಮಾರಕವಾಗುವ ಸಂಭವಿದೆ. ಆದ್ದರಿಂದ ವಿದ್ಯಾರ್ಥಿಗಳು, ಯುವಕರು ಈ ಬಗ್ಗೆ ಜಾಗೃತರಾಗಬೇಕು. ಅನೈತಿಕ, ಲೈಗಿಂಕ ಚಟುವಟಿಕೆಗಳಿಂದ ದೂರವಿರಬೇಕು, ಅನಗತ್ಯವಾಗಿ ಯುವತಿಯರನ್ನು ತಪ್ಪುದಾರಿಗೆ ಎಳೆಯುವವರ ಸಂಖ್ಯೆ ಬೆಳೆಯುತ್ತಿದ್ದು, ಈ ಬಗ್ಗೆ ಪೋಷಕರು, ಸಾರ್ವಜನಿಕರು ಜಾಗೃತರಾಗಲು ಈ ಜಾಥ ಹಮ್ಮಿಕೊಳ್ಳಲಾಗಿದೆ ಎಂದರು.

ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಮಾತನಾಡಿ, ಜಿಲ್ಲಾ ರಕ್ಷಣಾಧಿಕಾರಿಗಳ ಮಾರ್ಗದರ್ಶನದಲ್ಲಿ ಡಿವೈಎಸ್ಪಿಯವರ ನೇತೃತ್ವದಲ್ಲಿ ಈ ಜಾಥ ಹಮ್ಮಿಕೊಂಡಿದ್ದು, ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಜಾಥ ಸಂಚರಿಸಲಿದೆ. ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಈ ಜಾಥ ಹೆಚ್ಚು ಉಪಯುಕ್ತವಾಗಲಿದೆ. ಸಮಾಜದಲ್ಲಿ ಒಳ್ಳೆ ವಾತಾವರಣ ಮೂಡಿಸಲು ಪೊಲೀಸ್ ಇಲಾಖೆಸದಾಜಾಗೃತವಾಗಿದ್ದು, ಸಾರ್ವಜನಿಕರು ಸಹ ಸಹಕರಿಸುವಂತೆ ಮನವಿ ಮಾಡಿದರು. ಪಿಎಸ್‌ಐಗಳಾದ ಕೆ.ಸತೀಶ್‌ನಾಯ್ಕ, ಜೆ.ಶಿವರಾಜು, ಧರೆಪ್ಪಬಾಳಪ್ಪ ದೊಡ್ಡಮನಿ, ಠಾಣಾ ಸಿಬ್ಬಂದಿ, ಶಾಲಾ, ಕಾಲೇಜು ವಿದ್ಯಾರ್ಥಿಗಳು ಜಾಥದಲ್ಲಿ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ಗ್ರಾಮೀಣ ಭಾಗದ ಜನರಿಗೆ ಪರಿಸರದ ಬಗ್ಗೆ ಜಾಗೃತಿ ಮೂಡಿಸಲು ಎನ್‌ಎಸ್‌ಎಸ್ ಶಿಬಿರ ಸಹಕಾರಿ: ಶಾಸಕ ರಘುಮೂರ್ತಿ ಹೇಳಿಕೆ

» ಚಳ್ಳಕೆರೆ

ಗ್ರಾಮೀಣ ಭಾಗಗಳಲ್ಲಿ ರಾಷ್ಟ್ರೀಯ ಯೋಜನಾ ಶಿಬಿರಗಳನ್ನು ನಡೆಸುವ ಮೂಲಕ ಗ್ರಾಮೀಣ ಜನರಿಗೆ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವುದು ಉತ್ತಮ ಕಾರ್ಯ ರಾಷ್ಟ್ರೀಯ ಯೋಜನಾ ಶಿಬಿರಗಳು ವಿದ್ಯಾರ್ಥಿಗಳಿಗೂ ಸಹ ಸಾಮಾಜಿಕ ಚಟುವಟಿಕೆಗಳ ಬಗ್ಗೆ ಅರಿವು ಮೂಡಿಸುತ್ತವೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನನ್ನಿವಾಳ ಗ್ರಾಮದಲ್ಲಿ ಸೋಮವಾರ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಯೋಜನಾ ಶಿಬಿರದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಗಿಡನೆಡುವ ಕಾರ್ಯದ ಮೂಲಕ ಪರಿಸರ ಜಾಗೃತಿ ಮೂಡಿಸಲಾಯಿತು. ಗ್ರಾಮೀಣ ಭಾಗಗಳಲ್ಲಿ ಉತ್ತಮ ಪರಿಸರವನ್ನು ಸಂರಕ್ಷಣೆ ಮಾಡಿಕೊಳ್ಳಲು ಎಲ್ಲರೂ



ಸಹಕಾರ ನೀಡಬೇಕು. ಗ್ರಾಮ ಪಂಚಾಯಿತಿ ಆಡಳಿತವೂ ಸಹ ನಿರಂತರವಾಗಿ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನರ ಉತ್ತಮ ಆರೋಗ್ಯ ಕಾಪಾಡುವಲ್ಲಿ ನೆರವು ನೀಡಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿಬಿರಾಧಿಕಾರಿ ಪ್ರೊ.ಟಿ.ವಿಜಯಕುಮಾರ್, ಕಾಲೇಜು ವತಿಯಿಂದ ಪ್ರತಿವರ್ಷ ಗ್ರಾಮೀಣ ಭಾಗಗಳಲ್ಲಿ ಶಿಬಿರಗಳನ್ನು ಆಯೋಜನೆ ಮಾಡಲಾಗುತ್ತಿದೆ. ಶಿಬಿರದ ಮೂಲಕ ವಿದ್ಯಾರ್ಥಿಗಳೂ ಸಹ ಗ್ರಾಮೀಣ ಜನರೊಂದಿಗೆ ಬೆರೆತು ಕೆಲಸ ಕಾರ್ಯಗಳನ್ನು ಮಾಡುವ ಮೂಲಕ ಜನರ ವಿಶ್ವಾಸ ಗಳಿಸಲಿ ಎಂಬ ಉದ್ದೇಶ ನಮ್ಮದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ.ಆರ್.ರಂಗಪ್ಪ ವಹಿಸಿದ್ದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಮ್ಮರಾಜಣ್ಣ, ಉಪಾಧ್ಯಕ್ಷೆ ಬಿಬಿಜಾನ್, ಸದಸ್ಯರಾದ ಬಸವರಾಜು, ಪಾರಿಜಾತ, ಶಮೀವುಲ್ಲಾ, ಚಿನ್ನಯ್ಯ, ಸಂಯೋಜಕ ಕೃಷ್ಣೆಗೌಡ, ದೈಹಿಕ ಶಿಕ್ಷಣ ನಿರ್ದೇಶಕ ಎಚ್. ತಿಪ್ಪೇಸ್ವಾಮಿ, ಗ್ರಾಮದ ಮುಖಂಡರಾದ ರಾಜಣ್ಣ, ಮಾರ್ಕಂಡೇಯ, ಬೋಮ್ಮಣ್ಣ, ಗುರುಮೂರ್ತಿ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಭದ್ರಾ ಮೇಲ್ದಂಡೆಗೆ 5300 ಕೋಟಿ ರೂ ಬಿಡುಗಡೆಗೊಳಿಸುವಂತೆ ಕೇಂದ್ರ ಸಚಿವರಿಗೆ ಮನವಿ



» **ಚಿತ್ರದುರ್ಗ**

ಭದ್ರಾಮೇಲ್ದಂಡೆ ಯೋಜನೆಗೆ ರಾಷ್ಟ್ರೀಯ ಯೋಜನೆಯಡಿಯಲ್ಲಿ ಕಾಯ್ದಿರಿಸಿರುವ 5300 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಲು ಒತ್ತಾಯಿಸಿ ಕೇಂದ್ರ ಮಂತ್ರಿ ಎ.ನಾರಾಯಣಸ್ವಾಮಿ ಕಚೇರಿ ಎದುರು ಅನಿರ್ಧಿಷ್ಠಾವಧಿ ಧರಣಿ ನಡೆಸಲಾಗುವುದೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಐವತ್ತು ವರ್ಷಗಳ ಹಿಂದೆ ಕಾಣಿಸಿಕೊಂಡಿದ್ದ ಬರಗಾಲ ಮತ್ತೆ ಮರುಕಳಿಸುವ ಲಕ್ಷಣಗಳಿವೆ. ಭದ್ರಾಮೇಲ್ದಂಡೆ ಹಾಗೂ ಎತ್ತಿನಹೊಳೆ ಯೋಜನೆಗಳು ಮಧ್ಯಕರ್ನಾಟಕದ ಬಯಲುಸೀಮೆ ಬರಪೀಡಿತ ಚಿತ್ರದುರ್ಗ ಜಿಲ್ಲೆಗೆ ಅತ್ಯವಶ್ಯಕವಾಗಿದ್ದು, ಕೇಂದ್ರ ಸರ್ಕಾರವು ಭದ್ರಾಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿ 5300 ಕೋಟಿ ರೂ.ಗಳನ್ನು ಕಾಯ್ದಿರಿಸಿದೆ. ಹಾಗಾಗಿ ಹಣವನ್ನು ಕೇಂದ್ರದಿಂದ ಬಿಡುಗಡೆಗೊಳಿಸಿ ಭದ್ರಾಮೇಲ್ದಂಡೆ ಕಾಮಗಾರಿ ತುಂಗಭದ್ರಾದಿಂದ ಭದ್ರಾನದಿಗೆ ಸಂಪರ್ಕಿಸುವ ಸಮಗ್ರ ಕಾಮಗಾರಿಗೆ ಚುರುಕು ಮುಟ್ಟಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿಯನ್ನು ಒತ್ತಾಯಿಸಿದರು. ಇನ್ನು ಹತ್ತು ದಿನದಲ್ಲಿ ಕೇಂದ್ರ ಸರ್ಕಾರದಿಂದ 5300 ಕೋಟಿ ರೂ. ಬಿಡುಗಡೆಯಾಗದಿದ್ದಲ್ಲಿ ಜಿಲ್ಲಾ ಪಂಚಾಯಿತಿಯಲ್ಲಿರುವ ಸಂಸದ ಎ.ನಾರಾಯಣಸ್ವಾಮಿರವರ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಈಚಘಟ್ಟದ ಸಿದ್ದವೀರಪ್ಪ ಎಚ್ಚರಿಸಿದರು.ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಡಿ.ಎಸ್. ಹಳ್ಳಿ ಮಲ್ಲಿಕಾರ್ಜುನ, ಪ್ರಧಾನ ಕಾರ್ಯದರ್ಶಿ ರಾಮರೆಡ್ಡಿ, ನಿಜಲಿಂಗಪ್ಪ, ಬೋರೇಶ್, ಸತೀಶ್, ಮಂಜುನಾಥ, ಶ್ರೀಕಂಠಮೂರ್ತಿ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

### ಅಟಲ್ ಕೇಂದ್ರಗಳಲ್ಲಿ ಕಾಗದ ರಹಿತ ಸೇವೆಗೆ ಅವಕಾಶ

» **ದಾವಣಗೆರೆ**

ಜಿಲ್ಲೆಯ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ವಿವಿಧ ಸೇವೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಸ್ನೇಹಿಯಾಗಿ ಕಾಗದ ರಹಿತ ಸೇವೆಯನ್ನು ನೀಡುವ ಸಲುವಾಗಿ ಈ ಕೆಳಗಿನ ಅಂಶಗಳಲ್ಲಿ ಸೇವೆ ಒದಗಿಸಲು ಕ್ರಮವಹಿಸಲಾಗಿದೆ. ಅರ್ಜಿ ಸ್ವೀಕರಿಸಿದ ನಂತರ ಅರ್ಜಿದಾರರ ಮೊಬೈಲ್ ಸಂಖ್ಯೆಗೆ ಸ್ವೀಕೃತಿ ಎಸ್‌ಎಂಎಸ್ ನ್ನು ಹಾಗೂ ಅರ್ಜಿದಾರರ ಇ- ಮೇಲ್‌ಗೆ ಸ್ವೀಕೃತಿ ಪತ್ರದ ಪಿಡಿಎಫ್ ಪ್ರತಿಯನ್ನು ಕಳುಹಿಸಲಾಗುತ್ತಿದೆ. ಅರ್ಜಿಯ ಪ್ರತಿ ಹಂತದಲ್ಲಿನ ಪ್ರಕ್ರಿಯೆಯನ್ನು ಹಾಗೂ ಯಾವ ಹಂತದಲ್ಲಿ ಬಾಕಿ ಇದೆ ಎಂಬ ಮಾಹಿತಿಯನ್ನು ಅರ್ಜಿದಾರರ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ನ್ನು ಕಳುಹಿಸಲಾಗುವುದು. ಅರ್ಜಿ ವಿಲೇವಾರಿಯಾದ ನಂತರ, ಸಿದ್ದಗೊಂಡ ಪ್ರಮಾಣ ಪತ್ರವನ್ನು ಅರ್ಜಿದಾರರಿಗೆ ಈ ಪ್ರಮಾಣ ಪತ್ರದ ಪಿಡಿಎಫ್ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅರ್ಜಿದಾರರ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಲಿಂಕ್‌ನ್ನು ಕಳುಹಿಸಲಾಗುತ್ತದೆ. ಹಾಗೂ ಪ್ರಮಾಣ ಪತ್ರದ ಪಿಡಿಎಫ್ ಪ್ರತಿಯನ್ನು ಅರ್ಜಿದಾರರ ಇ-ಮೇಲ್‌ಗೆ ಕಳುಹಿಸಲಾಗುತ್ತಿದೆ. ಅರ್ಜಿದಾರರು ತಮ್ಮ ಹಂತದಲ್ಲಿಯೇ ಪ್ರಮಾಣ ಪತ್ರವನ್ನು ಮುದ್ರಣ ಮಾಡಿಕೊಳ್ಳಬಹುದು. ಈ ಅವಕಾಶದ ಸದುಪಯೋಗಪಡಿಸಿಕೊಳ್ಳಬೇಕ 'ಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದ್ದಾರೆ.

### ಯುವನಿಧಿ ಸಹಾಯವಾಣಿ ಕೇಂದ್ರ ಸ್ಥಾಪನೆ

» **ದಾವಣಗೆರೆ**

ಜಿಲ್ಲಾಡಳಿತ ವತಿಯಿಂದ ಸರ್ಕಾರದ 5 ನೇ ಗ್ಯಾರಂಟಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಂಭವಿಸಬಹುದಾದ ತೊಂದರೆಗಳನ್ನು ನಿವಾರಿಸಲು ಮಹಾನಗರ ಪಾಲಿಕೆಯಲ್ಲಿ ಆವರಣದಲ್ಲಿ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ.

ಅರ್ಜಿಯನ್ನು ನೋಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್ https://sevasindhugs.karnataka.gov.in ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಹಾಯವಾಣಿ ಸಂ: 6364638504, ರಾಜ್ಯ ಸಹಾಯವಾಣಿ ಸಂ: 18005999918 ಗೆ ಸಂಪರ್ಕಿಸಬಹುದೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ತಿಳಿಸಿದ್ದಾರೆ.

### ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ ಸೂಚನೆ

# ಎಲ್ಲಾ ಆಸ್ಪತ್ರೆಗಳಲ್ಲಿ ವಿಶೇಷ ವಾರ್ಡ್ ಸಜ್ಜುಗೊಳಿಸಿ



» **ದಾವಣಗೆರೆ**

ಕೋವಿಡ್ ಅಲ್ಲಲ್ಲಿ ವರದಿಯಾಗುತ್ತಿದ್ದು ಜೆಎನ್1 ತಳಿ ತೀವ್ರ ಸ್ವರೂಪ ಹೊಂದಿದ್ದು ಇದು ಹರಡದಂತೆ ಎಚ್ಚರಿಕೆ ವಹಿಸಿ ಎಲ್ಲಾ ಆಸ್ಪತ್ರೆಗಳಲ್ಲಿ ಕೋವಿಡ್ ಹಾಸಿಗೆ ಮತ್ತು ಆಕ್ಸಿಜನ್ ಘಟಕಗಳನ್ನು ಸಿದ್ದಪಡಿಸಿಟ್ಟುಕೊಳ್ಳುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಕೈಗಾರಿಕಾಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿರ್ದೇಶಕರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಗುಂಜನ್ ಕೃಷ್ಣ ಅವರು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಸೂಚನೆ ನೀಡಿದರು. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ 1019 ಜನರಿಗೆ ಕೋವಿಡ್ ಪರೀಕ್ಷೆ ನಡೆಸಿದ್ದು ಅದರಲ್ಲಿ 22 ಜನರಿಗೆ ಕೋವಿಡ್ ಕಂಡು ಬಂದಿದ್ದು ಜೆಎನ್1 ಯಾವುದೇ ತಳಿ ಇರುವುದಿಲ್ಲ. ಇಬ್ಬರು ಮಾತ್ರ ಇತರೆ ಖಾಯಿಲೆಯಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇನ್ನುಳಿದಂತೆ ಎಲ್ಲರೂ ಮನೆಯಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದಾರೆ. ಯಾರಿಗೂ ತೀವ್ರತರವಾದ ಲಕ್ಷಣಗಳಿರುವುದಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಾಹಿತಿ ನೀಡಿದರು. ಈ ವೇಳೆ ಚಿಗಟೇರಿ ಆಸ್ಪತ್ರೆಯಲ್ಲಿಯು ಪ್ರತ್ಯೇಕ ಕೋವಿಡ್ ವಾರ್ಡ್ ಕಾಯ್ದಿರಿಸುವಂತೆ ಮತ್ತು ಪಿಎಂ ಕೇರ್ಸ್‌ನಡಿ ಪೂರೈಸಲಾದ ವೆಂಟಿಲೇಟರ್‌ಗಳನ್ನು ಸಿದ್ದಪಡಿಸಿಟ್ಟುಕೊಳ್ಳುವಂತೆ ಸೂಚನೆ ನೀಡಿದರು.ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇದ್ದ ವೈದ್ಯರ ಹುದ್ದೆಗಳನ್ನು ನೇರ ಸಂದರ್ಶನದಲ್ಲಿ ಮಾಡಿ ಭರ್ತಿ ಮಾಡಲಾಗಿದೆ. ತಜ್ಞ ವೈದ್ಯರು ನೇರ ಸಂದರ್ಶನಕ್ಕೆ ಹಾಜರಾಗದ ಕಾರಣ ಈ ಹುದ್ದೆಗಳು ಖಾಲಿ ಇವೆ. ತಾಯಿ ಮತ್ತು ಮಗುವಿನ ಮರಣ ಪ್ರಮಾಣ ಕಡಿಮೆ ಮಾಡಲು ಹೆರಿಗೆ ಆಸ್ಪತ್ರೆಯಲ್ಲಿ ನಿಗಾ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸಲು ಆರೋಗ್ಯ ಅಭಿಯಾನದಡಿ ನಿವೃತ್ತ ತಜ್ಞ ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಡಿಹೆಚ್‌ಓ ಸಭೆಗೆ ತಿಳಿಸಿದಾಗ ತಾಯಿ ಮತ್ತು ಮಗುವಿನ ಮರಣ ಪ್ರಮಾಣದಲ್ಲಿ ಗಣನೀಯ ಇಳಿಕೆಯಾಗಬೇಕು, ಮರಣ ಹೊಂದಿದ ಪ್ರಕರಣಗಳನ್ನು ಕಡ್ಡಾಯವಾಗಿ ಆಡಿಟ್ ಮಾಡಿಸಬೇಕೆಂದು ಕಾರ್ಯದರ್ಶಿಯವರು ಸೂಚನೆ ನೀಡಿದರು.

**ಗ್ಯಾರಂಟಿಗಳ ಪರಿಶೀಲನೆ;** ಸರ್ಕಾರದ ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆಯಡಿದಾವಣಗೆರೆವಿಭಾಗದಿಂದ 2.9 ಕೋಟಿ ಮಹಿಳೆಯರು ಪ್ರಯಾಣಿಸಿದ್ದು ಇದರ ಬಾಬ್ತು ದಾವಣಗೆರೆ ವಿಭಾಗಕ್ಕೆ 55.79 ಕೋಟಿ ವೆಚ್ಚ ಭರಿಸಲಾಗಿದೆ ಎಂದು ವಿಭಾಗೀಯ ನಿಯಂತ್ರಕರು ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಹಾಸ್ಟೆಲ್ ಹತ್ತಿರ ಬಸ್‌ಗಳ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿದ್ದು ದೊಡ್ಡ ಬಸ್‌ಗಳು ಸಂಚರಿಸದ ರಸ್ತೆಯಾಗಿದ್ದಲ್ಲಿ ಮಿನಿಬಸ್‌ಗಳನ್ನು ಇಲ್ಲಿ ಓಡಿಸಲು ತಿಳಿಸಿದರು.

**ಗೃಹಲಕ್ಷ್ಮಿ:** ಜಿಲ್ಲೆಯಲ್ಲಿ ಈ ಯೋಜನೆಯಡಿ 384319ಗುರಿಯಲ್ಲಿ335022ಮಹಿಳೆಯರು ನೊಂದಣಿ ಮಾಡಿಸಿದ್ದು ಕೆವೈಸಿ ಮತ್ತು ಆಧಾರ್ ಲಿಂಕ್ ಮಾಡದ 4254 ಮಹಿಳೆಯರಿಗೆ ಹಣ ಸಂದಾಯವಾಗಿರುವುದಿಲ್ಲ. ಇದನ್ನು ಸರಿಪಡಿಸುವ ಕೆಲಸ ಮಾಡಲಾಗುತ್ತಿದೆ. ಅಕ್ಟೋಬರ್‌ವರೆಗೆ ತಲಾ 2 ಸಾವಿರದಂತೆ ಪಾವತಿಸಲಾಗಿದ್ದು ಕೇಂದ್ರ ಕಚೇರಿಯಿಂದಲೇ ಎಲ್ಲಾ ಫಲಾನುಭವಿಗಳಿಗೆ ಪಾವತಿಸಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಸಭೆಗೆ ತಿಳಿಸಿದಾಗ ಸಮಸ್ಯೆ ಇದ್ದಲ್ಲಿ ಸಂಪರ್ಕಿಸಲು ಕಚೇರಿಯಲ್ಲಿ ಜಿಲ್ಲಾ ಸಂಪರ್ಕ ಸಂಖ್ಯೆ ಸಾರ್ವಜನಿಕರಿಗಾಗಿ ಆರಂಭಿಸಲು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಈ ವೇಳೆ ತಿಳಿಸಿದರು.ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿನ 4.78 ಲಕ್ಷ ಗ್ರಾಹಕರಲ್ಲಿ ಗೃಹಜ್ಯೋತಿ ಯೋಜನೆಯಡಿ 420000 ಗ್ರಾಹಕರು ನೊಂದಾಯಿಸಿದ್ದು ಇವರಿಗೆ ನವೆಂಬರ್ ತಿಂಗಳಲ್ಲಿ 18.43 ಕೋಟಿ ಗೃಹಜ್ಯೋತಿಗಾಗಿ ವೆಚ್ಚ ಮಾಡಲಾಗಿದೆ ಎಂದು ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದರು.

ಅನ್ನಭಾಗ್ಯ ಯೋಜನೆಯಡಿ 3,33,278 ಕಾರ್ಡ್‌ಳಿದ್ದು 12,64,261 ಸದಸ್ಯರಿದ್ದಾರೆ. ಇವರಿಗೆ ತಲಾ 5 ಕೆ.ಜಿ. ಅಕ್ಕಿ ಜೊತೆಗೆ 5 ಕೆ.ಜಿ ಅಕ್ಕಿಯ ಹಣವನ್ನು ಅವರ ಖಾತೆಗೆ ನೇರವಾಗಿ ಪಾವತಿಸಲಾಗಿದ್ದು ನವೆಂಬರ್ ತಿಂಗಳಲ್ಲಿ 19.95 ಕೋಟಿ ಪಾವತಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕರು ಸಭೆಗೆ ತಿಳಿಸಿದರು.ಭತ್ತದ ಬೆಳೆಯನ್ನು ನೀರು ನಿಲ್ಲಿಸುವ ಪದ್ದತಿಯಡಿ ಬೆಳೆಯಲಾಗಿದ್ದು ಉತ್ತಮ ಇಳುವರಿ ಬಂದಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸಭೆಗೆ ತಿಳಿಸಿದಾಗ ಇದನ್ನು ದಾಖಲೀಕರಿಸಲು ಸೂಚನೆ ನೀಡಿ ಫ್ರೂಟ್ಸ್‌ನಡಿ ಶೇ 90 ರಷ್ಟು ರೈತರನ್ನು ನೊಂದಾಯಿಸಲು ತಿಳಿಸಿ ಬೆಳೆ ಪರಿಹಾರವನ್ನು ಮೊದಲ ಹಂತದಲ್ಲಿ ಪಾವತಿಗೆ ಕ್ರಮ ವಹಿಸಲಾಗುತ್ತಿದೆ ಎಂದರು.ಸಕಾಲದಲ್ಲಿ ಹಲವು ಸೇವೆಗಳನ್ನು ನೀಡಲಾಗುತ್ತಿದೆ, ಆದರೆ ಗ್ರಾಮ ಪಂಚಾಯಿತಿಯಲ್ಲಿ ಚರಂಡಿ ದುರಸ್ಥಿ, ಬೀದಿದೀಪ ದುರಸ್ಥಿ ಬಗ್ಗೆ ಬರುವ ಅರ್ಜಿಗಳನ್ನು ಸಕಾಲದಲ್ಲಿ ದಾಖಲಿಸುತ್ತಿಲ್ಲ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಪ್ರಸ್ತಾಪಿಸಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಈ ಬಗ್ಗೆ ಕ್ರಮ ವಹಿಸಲು ಸೂಚನೆ ನೀಡಲು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಯವರಿಗೆ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಂಡೆಬಸವೇಶ್ವರಸ್ವಾಮಿ ರಥೋತ್ಸವಕ್ಕೆ ಹರಿದುಬಂದ ಭಕ್ತರು



» **ಚಳ್ಳಕೆರೆ**

ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಶ್ರೀಬಂಡೆಬಸವೇಶ್ವರಸ್ವಾಮಿಯ ರಥೋತ್ಸವ ಸೋಮವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಯಶಸ್ವಿಯಾಗಿ ನಡೆಯಿತು. ಪ್ರತಿವರ್ಷದಂತೆ ಈ ವರ್ಷವೂ ಸಹ ನೆರೆಯ ಆಂಧ್ರಪ್ರದೇಶದಿಂದಲೂ ಸಹ ಗಣನೀಯ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿಯ ರಥೋತ್ಸವದಲ್ಲಿ ಪಾಲ್ಗೊಂಡರು.

ಸೋಮವಾರ ಬೆಳಗ್ಗೆ ಎಂದಿನಂತೆ ಸುಪ್ರಭಾತದೊಂದಿಗೆ ಪೂಜಾ ಕಾರ್ಯಕ್ರಮಗಳು ಆರಂಭವಾದವು ಮಧ್ಯಾಹ್ನ ದೇವರಿಗೆ ಮಹಾಮಂಗಳಾರತಿ ನಂತರ ನೆರೆದಿದ್ದ ಭಕ್ತರಿಗೆ ಪ್ರಸಾದ ವಿತರಣೆಯೂ ಸಹ ನಡೆಸಲಾಯಿತು. ರಥೋತ್ಸವವೂ ಗ್ರಾಮದ ದೇವಸ್ಥಾನದಿಂದ ಪಾದಗಟ್ಟೆವರೆಗೂ ಕೋಲಾಟ, ಭಜನೆ, ಗೊಂಬೆಕುಣಿತ, ನಂದಿಕೋಲು, ಡೊಳ್ಳುಕುಣಿತ, ಕೀಲುಕುದುರೆ ಮುಂತಾದ ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು.

**ಮುಕ್ತಿಬಾವುಟ ಹರಾಜು :** ಇದೇ ಸಂದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಶ್ರೀಸ್ವಾಮಿಯ ರಥದ ಮೇಲೆ ಅಲಂಕರಿಸಿದ್ದ ಮುಕ್ತಿ ಬಾವುಟವನ್ನು ಸಾರ್ವಜನಿಕವಾಗಿ ಹರಾಜು ಮಾಡಲಾಯಿತು. ಗ್ರಾಮದ ಮುಖಂಡ ಹೇಮಂತ 28 ಸಾವಿರಕ್ಕೆ ಮುಕ್ತಿಬಾವುಟವನ್ನು ಹರಾಜಿನಲ್ಲಿ ಪಡೆದರು.

ಗ್ರಾಮದ ಮುಖಂಡರಾದ ಜಾಜೂರು ಹನುಮಂತಪ್ಪ, ಕೆ.ಓ.ಪಾಲಣ್ಣ, ಜೆ.ಪಿ.ಜಯಪಾಲಯ್ಯ, ಕೆ.ಪಿ.ಭೂತಯ್ಯ, ಕಾಲುವೇಹಳ್ಳಿರಂಗಸ್ವಾಮಿ, ಗಾದ್ರಿಪಾಲಯ್ಯ, ಪಿ.ಶ್ರೀನಿವಾಸ್, ರವಿ, ರಾಘವೇಂದ್ರ, ರಾಕೇಶ್, ಸೊಪ್ಪಿನಪಾಲಯ್ಯ ಮುಂತಾದವರು ಉಪಸ್ಥಿತರಿದ್ದರು.

## ರೈತರನ್ನು ಒಕ್ಕಲೆಬ್ಬಿಸಿರುವ ತಹಶೀಲ್ದಾರ್ ವಿರುದ್ಧ ಪ್ರತಿಭಟನೆ



» **ಚಿತ್ರದುರ್ಗ**

ಜಿಲ್ಲೆಯಲ್ಲಿ ತೀವ್ರ ಬರಗಾಲ ಎದುರಾಗಿದ್ದರೂ ಸರ್ಕಾರ ರೈತರ ನೆರವಿಗೆ ಬರುವಲ್ಲಿ ವಿಫಲವಾಗಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.ಹಿರಿಯೂರಿನ ವಾಣಿವಿಲಾಸಸಾಗರ ಹಿನ್ನೀರಿನಲ್ಲಿ ಭೂಮಿ ಕಳೆದುಕೊಂಡ ರೈತರು ಸಾಮೂಹಿಕವಾಗಿ ಕೃಷಿ ಮಾಡಲು ಅಲ್ಲಿಯೇ ಗುಡಿಸಲು ನಿರ್ಮಿಸಿಕೊಂಡು ಫ್ಲೆಕ್ಸ್ ಹಾಕಿರುವುದನ್ನು ಹೊಸದುರ್ಗ ಶಾಸಕರ ಕುಮ್ಮಕ್ಕಿನಿಂದ ತಹಶೀಲ್ದಾರ್ ಕಿತ್ತುಹಾಕಿರುವುದರ ವಿರುದ್ಧ ಧಿಕ್ಕಾರಗಳನ್ನು ಕೂಗಿದ ಪ್ರತಿಭಟನಾನಿರತ ರೈತರು ತಹಶೀಲ್ದಾರ್ ಹಾಗೂ ಪೊಲೀಸರನ್ನು ಅಮಾನತ್ತುಗೊಳಿಸುವಂತೆ ಒತ್ತಾಯಿಸಿದರು. ಸ್ಪಿಂಕ್ಲರ್ ಮತ್ತು ತಾಡಪಾಲುಗಳ ಬೆಲೆ ಜಾಸ್ತಿ ಮಾಡಿರುವುದಲ್ಲದೆ ಕಳಪೆ ಗುಣಮಟ್ಟದ ಕೃಷಿ ಪರಿಕರಗಳನ್ನು ಹಿಂದಕ್ಕೆ ಪಡೆದು ಗುಣಮಟ್ಟದ ಪರಿಕರಗಳನ್ನು ಪೂರೈಸಬೇಕು.ನರೇಗಾದ ಬಹುತೇಕ ಕೆಲಸಗಳನ್ನು ಈ ವರ್ಷ ಕೃಷಿ ಮತ್ತು ತೋಟಗಾರಿಕೆಗಳಿಗೆ ತೊಡಗಿಸಬೇಕು. ಬರಗಾಲವಿರುವುದರಿಂದ ರೈತರ ಜಾನುವಾರುಗಳಿಗೆ ಅಗತ್ಯ ಪ್ರಮಾಣದ ಮೇವು ಒದಗಿಸಬೇಕು. ಜಟ್ಟುಗಟ್ಟಿರುವ ಭದ್ರಾಮೇಲ್ದಂಡೆ ಯೋಜನೆ ಕಾಮಗಾರಿಗಳಿಗೆ ಚುರುಕು ಮುಟ್ಟಿಸಬೇಕೆಂದು ರೈತರು ಆಗ್ರಹಿಸಿದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ, ಜಿಲ್ಲಾಧ್ಯಕ್ಷ ಡಿ.ಎಸ್.ಮಲ್ಲಿಕಾರ್ಜುನ, ಪ್ರಧಾನ ಕಾರ್ಯದರ್ಶಿ ರಾಮರೆಡ್ಡಿ, ನಿಜಲಿಂಗಪ್ಪ, ಬಸವರಾಜ್, ಬೋರೇಶ್, ಸತೀಶ, ಮಂಜುನಾಥ, ಶ್ರೀಕಂಠಮೂರ್ತಿ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ದಾವಣಗೆರೆ: ಕಾನೂನು ಅರಿವು ಕಾರ್ಯಕ್ರಮ

ದಾವಣಗೆರೆ: ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ(ರಿ), ನೆರಳು ಬೀಡಿ ಕಾರ್ಮಿಕರ ಯೂನಿಯನ್, ದಲಿತ ಮುಸ್ಲಿಂ ಮಹಿಳಾ ಒಕ್ಕೂಟ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಜ.9 ರಂದು ಬೆಳಿಗ್ಗೆ 11.30 ಕ್ಕೆ ನಗರದ ದೇವರಾಜ್ ಅರಸ್ ಬಡಾವಣೆಯ ನೆರಳು ಬೀಡಿ ಕಾರ್ಮಿಕರ ಯೂನಿಯನ್ ಸಭಾಂಗಣದಲ್ಲಿ ಭಾರತದ ಮೊದಲ ಶಿಕ್ಷಕಿಯರಾದ ಫಾತಿಮಾ ಶೇಖ್ ಸಾವಿತ್ರಿಬಾಯಿ ಪುಲೆ ಜನ್ಮದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಉದ್ಘಾಟಿಸುವರು. ನೆರಳು ಬೀಡಿ ಕಾರ್ಮಿಕರ ಯೂನಿಯನ್ ಅಧ್ಯಕ್ಷರಾದ ಜಬೀನಾ ಖಾನಂ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಅರುಣಕುಮಾರ್. ಎಲ್.ಹೆಚ್, ಅಜಾದ್ ನಗರದ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಇಮ್ರಾನ್ ಬೇಗ್ ಮಾತನಾಡುವರು.

**ಪ್ರಮುಖ ಸುದ್ದಿ**

### ಪ್ರಧಾನಮಂತ್ರಿ ಮತ್ಸಸಂಪದ ಯೋಜನೆಗೆ ಆಯ್ಕೆ

# ಪ್ರತಿ ಹೆಕ್ಟೇರ್‌ಗೆ ರೂ.7 ಲಕ್ಷ ಘಟಕ ವೆಚ್ಚ: ಜಿಲ್ಲಾಧಿಕಾರಿ

» **ದಾವಣಗೆರೆ**



ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿಮೀನುಮರಿಸಾಕಾಣಿಕೆಗೆ ಫಾರಂ ಪಾಂಡ್ ನಿರ್ಮಾಣಕ್ಕೆ ಅರ್ಜಿ ಸಲ್ಲಿಸಿದ ಜಿಲ್ಲೆಯ ರೈತರನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಜನವರಿ 8 ರಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಫಲಾನುಭವಿಗಳ ಆಯ್ಕೆ ಸಭೆಯಲ್ಲಿ ಮಾತನಾಡಿದ ಅವರು ಮತ್ಸ್ಯ ಸಂಪದ ಯೋಜನೆಯಡಿ ಪ್ರತಿ ಹೆಕ್ಟೇರ್‌ಗೆ ಮೀನು ಕೃಷಿಗಾಗಿ ರೂ.7 ಲಕ್ಷ ಘಟಕ ವೆಚ್ಚ ನಿಗದಿ ಮಾಡಲಾಗಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯಲು ಕೆರೆ ಅಥವಾ ಅಚ್ಚುಕಟ್ಟು ಪ್ರದೇಶದಲ್ಲಿ ಜಮೀನು ಹೊಂದಿರಬೇಕು. ಸಾಮಾನ್ಯ ವರ್ಗದವರಿಗೆ ಘಟಕ ವೆಚ್ಚದಲ್ಲಿ ಶೇ 40 ರಷ್ಟು, ಪ.ಜಾ, ಪ.ಪಂ ಹಾಗೂ ಮಹಿಳಾ ಫಲಾನುಭವಿಗಳಿಗೆ ಶೇ 60 ರಷ್ಟು ಸಬ್ಸಿಡಿ ನೀಡಲಾಗುತ್ತದೆ.

ದಾವಣಗೆರೆ ಜಿಲ್ಲೆಗೆ ಒಟ್ಟು 25 ಎಕರೆಯವರೆಗೆ ಮತ್ಸ್ಯ ಸಂಪದ ಯೋಜನೆಯಡಿ ಮೀನು ಕೃಷಿಗೆ ಅವಕಾಶ ಇದ್ದು ಈಗ 10 ಜನರು ಮಾತ್ರ ಅರ್ಜಿ ಸಲ್ಲಿಸಿದ್ದು 4.2 ಹೆಕ್ಟೇರ್‌ಗೆ ಅನುಮತಿ ನೀಡಲಾಗಿದೆ.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾಧಿಕಾರಿ ಶಾರದಮ್ಮ, ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಡಿ.ಅಣ್ಣಪ್ಪಸ್ವಾಮಿ ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T